ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ
ದಾವಣಗೆರೆ । ಹಾವೇರಿ । ಗದಗ । ರಾಯಚೂರು । ವಿಜಯನಗರ । ತುಮಕೂರು

# ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು | ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ | EDITOR : S VENKATESULU

ಸಂಪುಟ : 01 ಸಂಚಿಕೆ : 67 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಶನಿವಾರ ದಿನಾಂಕ : 19-09-2026 ಪುಟ : 04 ಬೆಲೆ : 2-00

# ತುಳು ಭಾಷೆಗೆ ಸಿಕ್ತು ಅಧಿಕೃತ ಸ್ಥಾನಮಾನ

## ಕರ್ನಾಟಕದ 2ನೇ ಹೆಚ್ಚುವರಿ ಅಧಿಕೃತ ಭಾಷೆಯಾಗಿ ಸಿಎಂ ಘೋಷಣೆ






ಮಂಗಳೂರು : ಕರಾವಳಿಗರ ದಶಕಗಳ ಕನಸು, ತುಳುನಾಡಿನ ಜನರ ನಿರಂತರ ಹೋರಾಟಕ್ಕೆ ಕೊನೆಗೂ ಐತಿಹಾಸಿಕ ಜಯ ಸಿಕ್ಕಿದ್ದು, ಮಂಗಳೂರಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ವಿಶೇಷ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ತುಳು ಭಾಷೆಗೆ ಕರ್ನಾಟಕದ ಎರಡನೇ ಹೆಚ್ಚುವರಿ ಅಧಿಕೃತ ಭಾಷೆಯ ಮಾನ್ಯತೆ ನೀಡಲು ಸರ್ಕಾರ ತೀರ್ಮಾನಿಸಿದೆ. ಇದರೊಂದಿಗೆ, ದಕ್ಷಿಣ ಕನ್ನಡ ಜಿಲ್ಲೆಯ ಹೆಸರು ಬದಲಾವಣೆ ಹಾಗೂ ಕರಾವಳಿಗೆ ಹೊಸ ಪ್ರವಾಸೋದ್ಯಮ ನೀತಿ ಸೇರಿದಂತೆ ಹಲವು ತೀರ್ಮಾನಗಳನ್ನ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ (ತುಳುನಾಡು) ಜನರ ದಶಕಗಳ ಹಕ್ಕೊತ್ತಾಯವಾಗಿದ್ದ ತುಳು ಭಾಷೆಗೆ ಅಧಿಕೃತ

2ನೇ ಪುಟಕ್ಕೆ...

ಸಂಪುಟ ಸಭೆಯ ಪ್ರಮುಖ ತೀರ್ಮಾನಗಳು
* ತುಳುವಿಗೆ 2ನೇ ಹೆಚ್ಚುವರಿ ಅಧಿಕೃತ ಭಾಷೆ ಸ್ಥಾನಮಾನ
* ದಕ್ಷಿಣ ಕನ್ನಡ ಜಿಲ್ಲೆಗೆ 'ಮಂಗಳೂರು ಜಿಲ್ಲೆ' ಎಂದು ಮರುನಾಮಕರಣ ಕುರಿತು ಜನಾಭಿಪ್ರಾಯ ಸಂಗ್ರಹ
* ಕರಾವಳಿ-ಮಲೆನಾಡಿಗೆ ಹೊಸ ಪ್ರವಾಸೋದ್ಯಮ ನೀತಿ ಜಾರಿ
* ಧಾರ್ಮಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳ ಅಭಿವೃದ್ಧಿಗೆ 12 ಕೋಟಿ ವಿಶೇಷ ಅನುದಾನ
* ಕಂಬಳ ಅನುದಾನ 40 ಲಕ್ಷದಿಂದ 1 ಕೋಟಿಗೆ ಹೆಚ್ಚಳ
* ಪುತ್ತೂರಿನಲ್ಲಿ 549.79 ಕೋಟಿ ವೆಚ್ಚದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು, ಬೋಧನಾ ಆಸ್ಪತ್ರೆ ಮತ್ತು ಹಾಸ್ಟೆಲ್
* ಮುಲ್ಕಿಯಲ್ಲಿ 150 ಎಕರೆ ಪ್ರದೇಶದಲ್ಲಿ ಬೃಹತ್ ಫಿಶರೀಸ್ ಪಾರ್ಕ್
* ಹೆಬ್ರಿಯಲ್ಲಿ 113.89 ಎಕರೆ ಪ್ರದೇಶ ಕೈಗಾರಿಕಾ ವಲಯ ಅಭಿವೃದ್ಧಿಗೆ ನಿರ್ಧಾರ

ತುಳುನಾಡಿನ ಭಾಷೆ, ಸಂಸ್ಕೃತಿ ಮತ್ತು ಕರಾವಳಿ ಅಭಿವೃದ್ಧಿಗೆ ಸಚಿವ ಸಂಪುಟದ ಮಹತ್ವದ ನಿರ್ಧಾರಗಳು.

## ಸಿದ್ದರಾಮಯ್ಯಗೆ ರೆಸ್ಟ್ ಗ್ಯಾರಂಟಿ ಕೊಟ್ಟವ್ರೆ: ಆರ್.ಅಶೋಕ್ ವ್ಯಂಗ್ಯ



ರಾಮನಗರ: ಕಾಂಗ್ರೆಸ್ ಪಕ್ಷ ಸಿದ್ದರಾಮಯ್ಯ ಅವರಿಗೆ ರೆಸ್ಟ್ ಗ್ಯಾರಂಟಿ ಕೊಟ್ಟಿದೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ವ್ಯಂಗ್ಯವಾಡಿದರು.

ಡಿ.ಕೆ.ಶಿವಕುಮಾರ್ ಮುಖ ನೋಡಿ ಒಕ್ಕಲಿಗರು ವೋಟ್ ಹಾಕಲ್ಲ ಎಂದು ಅವರದೇ ಪಕ್ಷದ ಕೆ.ಎನ್. ರಾಜಣ್ಣ ಹೇಳಿದ್ದಾರೆ. ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಕರಿಬೇವು ಸೊಪ್ಪಿನಂತೆ ಒಗ್ಗರಣೆಗೆ ಬಳಸಿ ಸೈಡಿಗೆ ಇಟ್ಟಿದೆ. ಅವರ ಬಾಯಿ ಮುಚ್ಚಿಸಲಾಗಿದ್ದು, ಮೈಸೂರಿನ ಮನೆಯಲ್ಲಿ ರೆಸ್ಟ್ ಗ್ಯಾರಂಟಿ ಮಾಡುವ ಸ್ಥಿತಿಗೆ ತರಲಾಗಿದೆ ಎಂದು ಕುಟುಕಿದರು.

2ನೇ ಪುಟಕ್ಕೆ...

## ಇಂದು ತೀರ್ಥಹಳ್ಳಿಗೆ ಸಿಎಂ ಭೇಟಿ

### ಶಾಲಾ ಕಾಲೇಜುಗಳಿಗೆ ರಜೆ ಘೋಷಣೆ



ಶಿವಮೊಗ್ಗ: ಕಸ್ತೂರಿ ರಂಗನ್ ವರದಿಯ ಬಗ್ಗೆ ರೈತರ ಜೊತೆ ಚರ್ಚಿಸಲು ಸಿಎಂ ಡಿ.ಕೆ ಶಿವಕುಮಾರ್ ಅವರು ಸೆ.19 ರಂದು ತೀರ್ಥಹಳ್ಳಿಗೆ ಭೇಟಿ ನೀಡಲಿದ್ದಾರೆ. ಈ ಹಿನ್ನೆಲೆ ಅಲ್ಲಿನ ಮೂರು ಶಾಲೆ ಹಾಗೂ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ.

ತೀರ್ಥಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜು ಮತ್ತು ಯು.ಆರ್.ಅನಂತಮೂರ್ತಿ ಪ್ರೌಢ ಶಾಲೆಗೆ ರಜೆ ಘೋಷಣೆ ಮಾಡಲಾಗಿದೆ. ಅಲ್ಲದೇ ಬಾಳೇಬೈಲು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೂ ರಜೆ ಘೋಷಣೆ ಮಾಡಿ ತಹಶಿಲ್ದಾರ್ ರಂಜಿತ್ ಅವರು ಆದೇಶಿಸಿದ್ದಾರೆ.

## ಅಕ್ರಮ ಗಣಿಗಾರಿಕೆ:

### ಸಚಿವ ಲಮಾಣಿಗೆ 3 ಕೋಟಿ ದಂಡ



ಹಾವೇರಿ: ಪರವಾನಗಿ ನಿಯಮಗಳನ್ನು ಉಲ್ಲಂಘಿಸಿ ಕಲ್ಲು ಗಣಿಗಾರಿಕೆ ನಡೆಸಿದ್ದ ಆರೋಪದಡಿ, ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ರಾಜ್ಯದ ಸಕ್ಕರೆ ಜವಳಿ ಸಚಿವ ರುದ್ರಪ್ಪ ಲಮಾಣಿ ಅವರಿಗೆ ಸುಮಾರು 3 ಕೋಟಿ ದಂಡ ವಿಧಿಸಲಾಗಿದೆ. ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಹುಣಸಿಕಟ್ಟಿ ಬಳಿಯಲ್ಲಿ ಕ್ವಾರಿ ನಡೆಸಲು ರುದ್ರಪ್ಪ ಲಮಾಣಿ

2ನೇ ಪುಟಕ್ಕೆ...

## ರಾಜ್ಯ ಬಿಜೆಪಿ ಬಲವರ್ಧನೆಗೆ ಮಾಸ್ಟರ್ ಪ್ಲ್ಯಾನ್



2028ರ ಚುನಾವಣೆಯಲ್ಲಿ ಬಿಜೆಪಿ ಗೆಲವು ಸಾಧಿಸುವುದು ಅಸಾಧ್ಯ ಅನ್ನೋದು ಬಿಜೆಪಿ ಹೈಕಮಾಂಡ್‌ಗೆ ತಿಳಿದಿದೆ. ಹೀಗಾಗಿ ರಾಜ್ಯ ಬಿಜೆಪಿ ಗಟ್ಟಿಗೊಳಿಸಲು ಇದೀಗ ಬಿಜೆಪಿ ಹೈಕಮಾಂಡ್ ಮಾಸ್ಟರ್ ಪ್ಲಾನ್ ಹೆಣದಿದೆ. ರಾಜ್ಯ ಬಿಜೆಪಿ

ಬೆಂಗಳೂರು : ವಿಧಾನಸಭೆ ಚುನಾವಣೆಗೆ ಇನ್ನು 2 ವರ್ಷ ಇದೆ. ಆದ್ರೆ ಈಗಾಗಲೇ ರಾಜ್ಯದಲ್ಲಿ ತಮ್ಮ ತಮ್ಮ ಬಲವರ್ಧನೆಗೆ ಪಕ್ಷಗಳು ಮುಂದಾಗಿವೆ. ಸದ್ಯ ರಾಜ್ಯ ಬಿಜೆಪಿ ಮನೆಯೊಂದು ಹತ್ತು ಬಾಗಿಲಿನಂತಾಗಿದೆ.

ರಾಜ್ಯ ಬಿಜೆಪಿಯಲ್ಲಿ ಅಸಮಾಧಾನಿತರು, ಉಚ್ಚಾಟಿತರೇ ಜಾಸ್ತಿ ಆಗಿದ್ದು, ಇದರೊಂದಿಗೆ ಸದ್ಯ ಮನೆಯೊಂದು ಮೂರು ಬಾಗಿಲು ಅಲ್ಲ, ಹತ್ತು ಬಾಗಿಲು ಆಗಿದೆ. ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಜೊತೆಗೆ ಉಳಿದ ನಾಯಕರು ಒಗ್ಗುಡುತ್ತಿಲ್ಲ. ಜೊತೆಗೆ ಅನೇಕ ಬಿಜೆಪಿಯ ಪ್ರಮುಖ ನಾಯಕರು ಪಕ್ಷ ಬಿಟ್ಟು ಹೋದ್ರೆ, ಕೆಲವರು ಉಚ್ಚಾಟನೆಗೊಂಡಿದ್ದಾರೆ.

2ನೇ ಪುಟಕ್ಕೆ...

## ಕದ್ರಿ ಮಂಜುನಾಥನಿಗೆ ವಿಶೇಷ ಪೂಜೆ

### ಸಿಎಂ ಡಿಕೆಶಿ, ಬಸವಂತಪ್ಪ ಭಾಗಿ



ಮಂಗಳೂರು: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಉಪಸ್ಥಿತಿಯಲ್ಲಿ ಧಾರ್ಮಿಕ ದತ್ತಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಸಚಿವ ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್. ಬಸವಂತಪ್ಪ ಅವರು ಶುಕ್ರವಾರ ಮಂಗಳೂರಿನ ಐತಿಹಾಸಿಕ ಕದ್ರಿ ಶ್ರೀ

3ನೇ ಪುಟಕ್ಕೆ...

## ಕುಡಿದ ಮತ್ತಲ್ಲಿ ಗೋಡೆಗೆ ಗುದ್ದಿ ತಾಯಿ ಕೊಂದ ಪಾಪಿ ಮಗ




ದಾವಣಗೆರೆ : ಕುಡಿದ ಮತ್ತಿನಲ್ಲಿ ಮಗನೇ ತನ್ನ ತಾಯಿಯನ್ನು ಗೋಡೆಗೆ ಗುದ್ದಿ ಹತ್ಯೆಗೈದಿರುವ ಆಘಾತಕಾರಿ ಘಟನೆ ದಾವಣಗೆರೆ ತಾಲೂಕಿನ ಆರನೇಕಲ್ಲು ಗ್ರಾಮದಲ್ಲಿ ನಡೆದಿದೆ. ಘಟನೆಯಿಂದ ಗ್ರಾಮದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ತಾಯಿಯ ಸಾವಿನಿಂದ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ದುಃಖದಲ್ಲಿ ಮುಳುಗಿದ್ದಾರೆ.

3ನೇ ಪುಟಕ್ಕೆ...

## ಗಾಲಿ ಜನಾರ್ದನ ರೆಡ್ಡಿ ಹೇಳಿಕೆಗೆ ಭರತ್ ರೆಡ್ಡಿ ತಿರುಗೇಟು




ಬಳ್ಳಾರಿ: ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಅವರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಭಗವದ್ಗೀತೆಯ ಉಲ್ಲೇಖದೊಂದಿಗೆ ತಿರುಗೇಟು ನೀಡಿ-ದರು. ಯುದ್ಧದ ಕುರಿತು ಮುಂಚಿತವಾಗಿಯೇ ಮಾತನಾಡಬಾರದು. ರಣರಂಗದಲ್ಲಿ ಯಾರು ರಣಹೇಡಿಗಳು ಎಂಬುದು ಮುಂದೆ ಗೊತ್ತಾಗುತ್ತದೆ ಎಂದು ಅವರು ಹೇಳಿದರು.

2028ರ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಜನರೇ ಎಲ್ಲದಕ್ಕೂ ಉತ್ತರ ನೀಡಲಿದ್ದಾರೆ. ಜನರ ತೀರ್ಪೇ ಅಂತಿಮವಾಗಿದ್ದು, ಚುನಾವಣೆಯ ಸಂದರ್ಭದಲ್ಲಿ ಯಾರು ಏನು ಎಂಬುದು ಜನರಿಗೆ ತಿಳಿಯಲಿದೆ ಎಂದು ಭರತ್ ರೆಡ್ಡಿ ತಿಳಿಸಿದರು.

2ನೇ ಪುಟಕ್ಕೆ....

## ಸ್ಥಳೀಯ ಚುನಾವಣೆಗಳಿಗೆ ಕಾಂಗ್ರೆಸ್ ರಣತಂತ್ರ



ಬೆಂಗಳೂರು: 2028ರ ವಿಧಾನಸಭಾ ಚುನಾವಣೆಗೂ ಮುನ್ನ ಮಹಾನಗರ ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಸರಣಿ ಚುನಾವಣೆಗಳು ನಡೆಯುವ ನಿರೀಕ್ಷೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಹೈಕಮಾಂಡ್ ರಾಜ್ಯದಲ್ಲಿ ಪಕ್ಷದ ಸಂಘಟನಾ ಸಿದ್ಧತೆಗಳನ್ನು ಚುರುಕುಗೊಳಿಸಿದೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ (ಸಂಘಟನೆ) ಮತ್ತು ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ರಾಜ್ಯಕ್ಕೆ ಆಗಮಿಸಿ ಪಕ್ಷದ ರಾಜ್ಯ ನಾಯಕರೊಂದಿಗೆ ಸರಣಿ ಸಭೆ ನಡೆಸಿದರು.

ಪಕ್ಷದ ಸಂಘಟನೆ ಬಲಪಡಿಸುವುದು, ಆಂತರಿಕ ಸಮಸ್ಯೆಗಳನ್ನು ಬಗೆಹರಿಸುವುದು ಹಾಗೂ ಮುಂಬರುವ ಚುನಾವಣಾ ಸವಾಲುಗಳಿಗೆ ಕಾರ್ಯಕರ್ತರನ್ನು ಸಜ್ಜುಗೊಳಿಸುವ ಕುರಿತು ಸಭೆಗಳಲ್ಲಿ ಚರ್ಚಿಸಲಾಯಿತು. ಎಐಸಿಸಿ ಕಾರ್ಯದರ್ಶಿ ಗೋಪಿನಾಥ್ ಪಳನಿಯಪ್ಪನ್ ಕೂಡ ಅವರೊಂದಿಗೆ ಆಗಮಿಸಿದ್ದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಗಳಿಸಿದ ಯಶಸ್ಸನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ, ರಾಜ್ಯ ಕಾಂಗ್ರೆಸ್‌ನ ವಿವಿಧ ಬಣಗಳನ್ನು ಒಗ್ಗೂಡಿಸಿಕೊಂಡು ಮುಂದಿನ

2ನೇ ಪುಟಕ್ಕೆ...

## ಏಕಮುಖ ರಾಜಧನ ಸಂಗ್ರಹಕ್ಕೆ ಆಗ್ರಹ: ದಾವಣಗೆರೆ ಸೇರಿ ರಾಜ್ಯಾದ್ಯಂತ

### ಕಲ್ಲು ಗಣಿ, ಕ್ರಷರ್ ಅನಿರ್ದಿಷ್ಟಾವಧಿ ಮುಷ್ಕರ ಆರಂಭ



ದಾವಣಗೆರೆ: ಏಕಮುಖ ರಾಜಧನ ಸಂಗ್ರಹಣಾ ವ್ಯವಸ್ಥೆಯನ್ನು ಜಾರಿಗೆ ತರಬೇಕು ಮತ್ತು ತಕ್ಷಣವೇ ಇಮ್ಮಡಿ ರಾಜಧನವನ್ನು ಕೈಬಿಡಬೇಕೆಂದು ಒತ್ತಾಯಿಸಿ ಯೂನಿಯನ್ ಆಫ್ ಕರ್ನಾಟಕ ಕ್ವಾರಿ ಮತ್ತು ಸ್ಟೋನ್ ಕ್ರಷರ್ ಓನರ್ಸ್ ಅಸೋಸಿಯೇಷನ್ ಹಾಗೂ ಕರ್ನಾಟಕ ರಾಜ್ಯ ಕಲ್ಲು ಗಣಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಒಕ್ಕೂಟದ ವತಿಯಿಂದಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಲಾಗಿದೆ.

ಮುಷ್ಕರದ ಹಿನ್ನೆಲೆಯಲ್ಲಿ ಇಂದು ಬೆಳಿಗ್ಗೆ 6 ಗಂಟೆಯಿಂದಲೇ ರಾಜ್ಯಾದ್ಯಂತ ಎಲ್ಲಾ ಕ್ವಾರಿ ಮತ್ತು ಕ್ರಷರ್ ಘಟಕಗಳ ಕಾರ್ಯಾಚರಣೆ, ಎಂ ಸ್ಯಾಂಡ್ ಹಾಗೂ ಜಲ್ಲಿ ಕಲ್ಲು ಉತ್ಪನ್ನಗಳ ಉತ್ಪಾದನೆ, ಮಾರಾಟ ಮತ್ತು ಸಾಗಾಣಿಕೆಯನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಿ ಬಂದ್ ಆಚರಿಸಲಾಯಿತು.

ರಾಜ್ಯ ಸರ್ಕಾರವು

2ನೇ ಪುಟಕ್ಕೆ...

ಒಂದನೇ ಪುಟದಿಂದ...

# ತುಳು ಭಾಷೆಗೆ ಸಿಕ್ತು ಅಧಿಕೃತ ಸ್ಥಾನಮಾನ:

## ಕರ್ನಾಟಕದ 2ನೇ ಹೆಚ್ಚುವರಿ ಅಧಿಕೃತ ಭಾಷೆಯಾಗಿ ಘೋಷಣೆ

ಸ್ಥಾನಮಾನಕ್ಕೆ ರಾಜ್ಯ ಸರ್ಕಾರ ಒಪ್ಪಿಗೆ ನೀಡಿದ್ದು, ವಿಶೇಷ ಸಚಿವ ಸಂಪುಟ ಸಭೆಯಲ್ಲಿ ತುಳು ಭಾಷೆಗೆ ಕರ್ನಾಟಕದ ಎರಡನೇ ಹೆಚ್ಚುವರಿ ಅಧಿಕೃತ ಭಾಷೆಯ ಮಾನ್ಯತೆ ನೀಡಲು ರಾಜ್ಯ ಸರ್ಕಾರ ಅಧಿಕೃತವಾಗಿ ತೀರ್ಮಾನಿಸಿದೆ. ಪಂಚ ದ್ರಾವಿಡ ಭಾಷೆಗಳಲ್ಲಿ ಒಂದಾಗಿ, 2,000 ವರ್ಷಗಳಿಗಿಂತಲೂ ಹೆಚ್ಚು ಇತಿಹಾಸ ಹೊಂದಿರುವ ಮತ್ತು ಜಾಗತಿಕವಾಗಿ ಸುಮಾರು ಒಂದು ಕೋಟಿ ಜನ ಮಾತನಾಡುವ ತುಳು ಭಾಷೆಯ ಪ್ರಗತಿ ಹಾಗೂ ಸಂಸ್ಕೃತಿಯ ರಕ್ಷಣೆಗಾಗಿ, ಈ ಹಿಂದೆ ಡಾ. ಮೋಹನ್ ಆಳ್ವ ನೇತೃತ್ವದ ಸಮಿತಿಯು ಸಂವಿಧಾನದ 345ನೇ ವಿಧಿಯಡಿ ಎರಡನೇ ಅಧಿಕೃತ ಭಾಷಾ ಮಾನ್ಯತೆ ನೀಡಬಹುದು ಎಂದು ವರದಿ ಸಲ್ಲಿಸಿತ್ತು. ಅದರಲ್ಲೂ, ಸರ್ಕಾರದಿಂದ ಸಿಕ್ಕಿರುವ ಈ ಮಾನ್ಯತೆಯಿಂದಾಗಿ ಇನ್ಮುಂದೆ ಕರಾವಳಿ ಭಾಗದ ಸರ್ಕಾರಿ ಸಂಸ್ಥೆಗಳು ಮತ್ತು ಕಚೇರಿಗಳಲ್ಲಿ ದೈನಂದಿನ ಆಡಳಿತಾತ್ಮಕ ಸಂವಹನಕ್ಕಾಗಿ ಕನ್ನಡದ ಜೊತೆಗೆ ತುಳು ಭಾಷೆಯನ್ನೂ ಬಳಸಲು ಅಧಿಕೃತ ಅವಕಾಶ ಸಿಗಲಿದೆ. ತುಳು ಭಾಷೆಯ ಮಾನ್ಯತೆಯ ಜೊತೆಗೆ, ಕರಾವಳಿ ಜನರ ಬಹುದಿನಗಳ ಮತ್ತೊಂದು ಬೇಡಿಕೆಯಾದ, ದಕ್ಷಿಣ ಕನ್ನಡ ಜಿಲ್ಲೆಯನ್ನು ಮಂಗಳೂರು ಜಿಲ್ಲೆ ಎಂದು ಮರುನಾಮಕರಣ ಮಾಡುವ ಬಗ್ಗೆಯೂ ಸಚಿವ ಸಂಪುಟ ಸಭೆಯಲ್ಲಿ ಗಂಭೀರ ಚರ್ಚೆ ನಡೆದಿದೆ. ಈ ಬಗ್ಗೆ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಿ, ಮುಂದಿನ ಒಂದು ತಿಂಗಳ ಒಳಗಾಗಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ಭರವಸೆ ನೀಡಿದ್ದಾರೆ. ಇದರೊಂದಿಗೆ, ಮಲೆನಾಡು ಮತ್ತು ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮಕ್ಕೆ ಭಾರಿ ಉತ್ತೇಜನ ನೀಡುವ ನಿಟ್ಟಿನಲ್ಲಿ ಸಚಿವ ಸಂಪುಟವು 'ಹೊಸ ಟೂರಿಸಂ ಪಾಲಿಸಿ' ಜಾರಿಗೆ ತರಲು ಅನುಮೋದನೆ ನೀಡಿದೆ. ಕರಾವಳಿ ಭಾಗದ ಧಾರ್ಮಿಕ ಮತ್ತು ಸಾಂಸ್ಕೃತಿಕ ಕೇಂದ್ರಗಳ ಅಭಿವೃದ್ಧಿಗೆ ಸಚಿವ ಸಂಪುಟವು ಕೋಟ್ಯಂತರ ರೂಪಾಯಿಗಳ ವಿಶೇಷ ಪ್ಯಾಕೇಜ್ ಪ್ರಕಟಿಸಿದೆ. ಅದರಂತೆ, ಕರಾವಳಿಯ ಐತಿಹಾಸಿಕ ದೇವಸ್ಥಾನಗಳು ಮತ್ತು ಮಠಗಳ ಜೀರ್ಣೋದ್ಧಾರ ಹಾಗೂ ಮೂಲಸೌಕರ್ಯ ಅಭಿವೃದ್ಧಿಗಾಗಿ 12 ಕೋಟಿ ವಿಶೇಷ ಅನುದಾನ ಘೋಷಿಸಲಾಗಿದೆ. ಅದರಂತೆ, ಪುತ್ತೂರು ಮಹಾಲಿಂಗೇಶ್ವರ ದೇಗುಲಕ್ಕೆ 5 ಕೋಟಿ ರೂಪಾಯಿ ಹಾಗೂ ಒಡಿಯೂರು ಮಠ, ಮಾಣಿಲ ಮಠ ಸೇರಿದಂತೆ ಹಲವು ಕ್ಷೇತ್ರಗಳಿಗೆ ತಲಾ 1 ಕೋಟಿ ರೂಪಾಯಿ ನೀಡಲಾಗಿದೆ. ಇದರೊಂದಿಗೆ, ಸೌಹಾರ್ದತೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣದ ದೃಷ್ಟಿಯಿಂದ ಕರಾವಳಿ ಭಾಗದ ಉಳ್ಳಾಲ ಸೈಯದ್ ಮದನಿ ಜುಮ್ಮಾ ಮಸೀದಿಗೆ 5 ಕೋಟಿ ರೂಪಾಯಿ ಸೇರಿದಂತೆ ವಿವಿಧ ಚರ್ಚ್, ಮಸೀದಿ ಹಾಗೂ ಶೈಕ್ಷಣಿಕ ಸಂಸ್ಥೆಗಳಿಗೂ ನೆರವು ಘೋಷಿಸಲಾಗಿದೆ. ಕರಾವಳಿಯ ಹೆಮ್ಮೆಯ ಜಾನಪದ ಕ್ರೀಡೆ ಕಂಬಳಕ್ಕೆ ನೀಡುತ್ತಿದ್ದ ಅನುದಾನವನ್ನು 40 ಲಕ್ಷದಿಂದ 1 ಕೋಟಿ ರೂಪಾಯಿಗೆ ಏರಿಕೆ ಮಾಡಲಾಗಿದೆ. ಮುಂದುವರೆದು, ಪುತ್ತೂರಿನ ಬನ್ನೂರು ಗ್ರಾಮದ ಸೇಡಿಯಾಪು ಬಳಿ 549.79 ಕೋಟಿ ರೂಪಾಯಿ ವೆಚ್ಚದಲ್ಲಿ ನೂತನ ಸರ್ಕಾರಿ ವೈದ್ಯಕೀಯ ಕಾಲೇಜು, ಬೋಧನಾ ಆಸ್ಪತ್ರೆ ಮತ್ತು ಹಾಸ್ಟೆಲ್ ನಿರ್ಮಾಣಕ್ಕೆ ಒಪ್ಪಿಗೆ ಸಿಕ್ಕಿದೆ. ಇನ್ನು ಮುಲ್ಕಿ ತಾಲೂಕಿನಲ್ಲಿ 150 ಎಕರೆ ಜಾಗದಲ್ಲಿ ಬೃಹತ್ ಫಿಶರೀಸ್ ಪಾರ್ಕ್ ನಿರ್ಮಿಸಲು ತೀರ್ಮಾನಿಸಲಾಗಿದೆ. ಉಡುಪಿಯ ಹೆಬ್ರಿ ತಾಲೂಕಿನಲ್ಲಿ 113.89 ಎಕರೆ ಪ್ರದೇಶವನ್ನು ಕೈಗಾರಿಕಾ ವಲಯವಾಗಿ ರೂಪಿಸಿ, ಡೇಟಾ ಸೆಂಟರ್‌ಗಳು ಮತ್ತು ಹೊಸ ಉತ್ಪಾದನಾ ಘಟಕಗಳಿಗೆ ಜಾಗ ಹಂಚಿಕೆ ಮಾಡಲು ನಿರ್ಧರಿಸಲಾಗಿದೆ.

# ಸಿದ್ದರಾಮಯ್ಯಗೆ ರೆಸ್ಟ್ ಗ್ಯಾರಂಟಿ ಕೊಟ್ಟವ್ರೆ:

# ಆರ್.ಅಶೋಕ್ ವ್ಯಂಗ್ಯ

ಮಂಗಳೂರಿನಲ್ಲಿ ಮೊದಲ ಬಾರಿಗೆ ಸರ್ಕಾರ ಕ್ಯಾಬಿನೆಟ್ ಮೀಟಿಂಗ್ ನಡೆಸುತ್ತಿರುವ ವಿಚಾರ ಕುರಿತು ಪ್ರತಿಕ್ರಿಯಿಸಿ, ರಾಜ್ಯ ಸರ್ಕಾರ ಸಾಲದಲ್ಲಿ ಮುಳುಗಿದ್ದು, ಹೊಸ ಘೋಷಣೆಗೆ ಹಣ ಎಲ್ಲಿಂದ ತರುತ್ತೆ? ಕಾಂಗ್ರೆಸ್ ಸರ್ಕಾರ ಮೂರೇ ವರ್ಷಗಳಲ್ಲಿ 1.5 ಲಕ್ಷ ಕೋಟಿ ಸಾಲ ಮಾಡಲು ಹೊರಟಿದೆ. ಪ್ರಸ್ತುತ ವರ್ಷಕ್ಕೆ 35,000 ದಿಂದ 40,000 ಕೋಟಿ ಬಡ್ಡಿ ಕಟ್ಟುವ ಸ್ಥಿತಿ ಎದುರಾಗಿದೆ. ಸಾಲ ಮಾಡದೇ ಬಜೆಟ್ ಮಂಡಿಸಿ ತೋರಿಸಲಿ ಎಂದು ಸಿಎಂಗೆ ಅಶೋಕ್ ಸವಾಲು ಹಾಕಿದರು.

ಬೊಮ್ಮಾಯಿ ಸರ್ಕಾರ ಉಳಿತಾಯದ ಬಜೆಟ್ ನೀಡಿದ್ದರೆ, ಈ ಸರ್ಕಾರ ದಿವಾಳಿಯಾದ ಬಜೆಟ್ ನೀಡಿದೆ. 5,000 ಕೋಟಿ ಬಾಕಿ ಉಳಿಸಿಕೊಳ್ಳಲಾಗಿದ್ದು, ಸಿಬ್ಬಂದಿಗೆ ಸಂಬಳ ಹಾಗೂ ಡೀಸೆಲ್‌ಗೂ ಹಣವಿಲ್ಲದಂತಾಗಿದೆ. ಕ್ರಷರ್‌ಗಳಿಂದ ವರ್ಷಕ್ಕೆ 1 ಕೋಟಿ ಕಮಿಷನ್ ಬೇಡಿಕೆ ಇಟ್ಟಿರುವುದರಿಂದ ಜೆಲ್ಲಿ, ಎಂ-ಸ್ಯಾಂಡ್ ಸಿಗದೆ ರಸ್ತೆ ಕಾಮಗಾರಿಗಳು ಸ್ಥಗಿತಗೊಂಡಿವೆ. ಆಸ್ಪತ್ರೆಗಳಲ್ಲಿ ಔಷಧಿಯಿಲ್ಲ, ಅಂಗನವಾಡಿ ಕಾರ್ಯಕರ್ತೆಯರಿಗೆ ವೇತನ ಏರಿಕೆಯಾಗಿಲ್ಲ ಮತ್ತು ರೈತರಿಗೆ ಸೂಕ್ತ ಬರ ಪರಿಹಾರ ತಲುಪಿಲ್ಲ. ಹಿಂದೆ ಕಲಬುರಗಿಯಲ್ಲಿ ನಡೆಸಿದ ಕ್ಯಾಬಿನೆಟ್ ಸಭೆಯ ಘೋಷಣೆಗಳು ಒಂದೂ ಜಾರಿಯಾಗಿಲ್ಲ. ಈಗ ಮಂಗಳೂರಿನ ರೆಸಾರ್ಟ್‌ನಲ್ಲಿ ಮೀನು, ಏಡಿಕಾಯಿ ತಿಂದು-ಕೊಂಡು ಕ್ಯಾಬಿನೆಟ್ ನಡೆಸಿ ಜನರ ಮೂಗಿಗೆ ತುಪ್ಪ ಸವರುವ ಕೆಲಸ ಮಾಡುತ್ತಿದ್ದಾರೆ ಎಂದು ಟೀಕಿಸಿದರು.

# ಅಕ್ರಮ ಗಣಿಗಾರಿಕೆ: ಸಚಿವ ರುದ್ರಪ್ಪ ಲಮಾಣಿಗೆ 3 ಕೋಟಿ ರೂ.ದಂಡ

ಅವರು ಹಲವು ವರ್ಷಗಳ ಹಿಂದೆಯೇ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪರವಾನಗಿ ಪಡೆದುಕೊಂಡಿದ್ದಾರೆ. ಅದೇ ಜಾಗದಲ್ಲಿ ಕ್ವಾರಿಯನ್ನೂ ನಡೆಸುತ್ತಿದ್ದಾರೆ.

ಇದೇ ಕ್ವಾರಿಯಲ್ಲಿ ಅಕ್ರಮವಾಗಿ ಗಣಿಗಾರಿಕೆ ನಡೆಸಿ ಪರವಾನಗಿ ನಿಯಮ ಉಲ್ಲಂಘಿಸಿರುವುದನ್ನು ದಾಖಲೆ ಸಮೇತ ಪತ್ತೆ ಮಾಡಿರುವ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು, ರುದ್ರಪ್ಪ ಲಮಾಣಿ ಅವರಿಗೆ ನೋಟಿಸ್ ನೀಡಿದ್ದಾರೆ.

ಆರು ತಿಂಗಳ ಒಳಗಾಗಿ, ಸುಮಾರು 3 ಕೋಟಿ ದಂಡವನ್ನು ಪಾವತಿಸಬೇಕು ಎಂದು ಸೂಚಿಸಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ 60ಕ್ಕೂ ಹೆಚ್ಚು ಕಲ್ಲು ಕ್ವಾರಿ ಮಾಲೀಕರಿಗೆ ದಂಡ ವಿಧಿಸಲಾಗಿದೆ. ಈ ಪಟ್ಟಿಯಲ್ಲಿ ಸಚಿವ ರುದ್ರಪ್ಪ ಲಮಾಣಿ ಅವರ ಕಲ್ಲು ಕ್ವಾರಿಯೂ ಸೇರಿದೆ.

ಸುಮಾರು ವರ್ಷಗಳ ಹಿಂದೆಯೇ ರುದ್ರಪ್ಪ ಲಮಾಣಿ ಅವರು ತಮ್ಮ ಹೆಸರಿನಲ್ಲಿಯೇ ಕ್ವಾರಿಗೆ ಅನುಮತಿ ಪಡೆದುಕೊಂಡಿದ್ದಾರೆ. ಪರವಾನಗಿ ಮೀರಿ, ಹೆಚ್ಚಿನ ಪ್ರಮಾಣದಲ್ಲಿ ಕಲ್ಲು ಹೊರತೆಗೆದು ಸಾಗಿಸಿರುವುದು ಗೊತ್ತಾಗಿದೆ. ಹೀಗಾಗಿ, ಅವರಿಗೆ ಇತ್ತೀಚೆಗೆ ನೋಟಿಸ್ ನೀಡಲಾಗಿದೆ. ಮೂರು ಕಂತುಗಳನ್ನು ದಂಡ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಮೂಲಗಳು ತಿಳಿಸಿವೆ.

ಪುಲಿಕೇಶಿ ಹಾಗೂ ಪರಮೇಶ್ವರಪ್ಪ ಶಿವಣ್ಣನವರ ಅವರು ಕಲ್ಲು ಕ್ವಾರಿ ಕ್ರಷರ್ ನಡೆಸಲು ಪರವಾನಗಿ ಪಡೆದುಕೊಂಡಿದ್ದಾರೆ. ಅವರು ಸಹ ನಿಯಮ ಉಲ್ಲಂಘಿಸಿರುವುದು ಪತ್ತೆಯಾಗಿದೆ. ಇಬ್ಬರಿಗೂ ಸುಮಾರು 50 ಲಕ್ಷದಷ್ಟು ದಂಡ ವಿಧಿಸಲಾಗಿದೆ ಎಂದು ಇಲಾಖೆಯ ಮೂಲಗಳು ಹೇಳಿವೆ.

ಈ ಕುರಿತು ಹಾವೇರಿ ಜಿಲ್ಲಾ ಕ್ರಷರ್ಸ್ ಹಾಗೂ ಕ್ವಾರಿ ಓನರ್ಸ್ ಅಸೋಸಿಯೇಷನ್ ಅಧ್ಯಕ್ಷ ವರಾಜ ಬೆಳವಡಿ ಪ್ರತಿಕ್ರಿಯಿಸಿದ್ದು, ಸಚಿವ ರುದ್ರಪ್ಪ ಲಮಾಣಿ ಅವರಿಗೂ 3 ಕೋಟಿ ರೂ. ದಂಡ ಬಂದಿದೆ. ಅವರು ಮಂತ್ರಿಗಳಾಗಿದ್ದು, ಈ ವಿಚಾರವಾಗಿ ಮುಖ್ಯಮಂತ್ರಿಗಳ ಬಳಿ ಮಾತನಾಡಲು ಸಾಧ್ಯವಾಗುತ್ತಿಲ್ಲ. ನಾವು ಹೋರಾಟ ನಡೆಸಿದ ಬಳಿಕವಷ್ಟೇ ಈ ವಿಚಾರಗಳು ಬಯಲಿಗೆ ಬರುತ್ತಿವೆ ಎಂದು ಅವರು ಹೇಳಿದ್ದಾರೆ. ನಿಯಮ ಉಲ್ಲಂಘನೆಯಾಗಿರುವುದು ತಪ್ಪು ಎಂದು ಅವರೂ ಒಪ್ಪಿಕೊಂಡಿದ್ದಾರೆ. ಆದರೆ ಸರ್ಕಾರ ಅವರದ್ದೇ ಆಗಿರುವುದರಿಂದ ರುದ್ರಪ್ಪ ಲಮಾಣಿ ಅವರು ಈ ವಿಚಾರದಲ್ಲಿ ಅಸಹಾಯಕರಾಗಿದ್ದಾರೆ ಎಂದು ವರಾಜ ಬೆಳವಡಿ ಆರೋಪಿಸಿದ್ದಾರೆ.

ಪ್ರಿಯ ಓದುಗರೆ ನಿಮ್ಮ ಪ್ರೀತಿಯ ಅನಂತ ಜನಶಕ್ತಿ
ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿ ಪ್ರೋತ್ಸಾಹಿಸಿ

# ಬಾಕಿ ವೇತನ ಬಿಡುಗಡೆಗಾಗಿ ಬಿಸಿಯೂಟ ಕಾರ್ಮಿಕರಿಂದ ಧರಣಿ




ಬಳ್ಳಾರಿ : ತಮಗೆ ನೀಡಬೇಕಿರುವ 2 ತಿಂಗಳ ಬಾಕಿ ವೇತನವನ್ನು ಕೂಡಲೆ ಬಿಡುಗಡೆಗೆ ಆಗ್ರಹಿಸಿ ಇಂದು ಬಿಸಿಯೂಟ ಕಾರ್ಮಿಕರು ನಗರದಲ್ಲಿನ ಜಿಪಂಕಚೇರಿ ಮುಂದೆ ಧರಣಿ ಸತ್ಯಾಗ್ರಹ ನಡೆಸಿದರು.

ಎಐಯುಟಿಯುಸಿಗೆ ಸಂಯೋಜನೆಗೊಂಡ ಕರ್ನಾಟಕ ರಾಜ್ಯ ಸಂಯುಕ್ತ ಅಕ್ಷರ ದಾಸೋಹ ಕಾರ್ಮಿಕರ ಸಂಘದ ನೇತೃತ್ವದಲ್ಲಿ ಧರಣಿ ನಡೆಸಿ. ನಮ್ಮಲ್ಲಿ ಒಂಟಿ ಮಹಿಳೆಯರು, ವಿಧವೆಯರು ಇದ್ದು, ಈ ವೇತನದ ಮೇಲೆ ಅವಲಂಬಿತರಾಗಿದ್ದೇವೆ. ಜುಲೈ ಹಾಗೂ ಆಗಸ್ಟ್ ತಿಂಗಳುಗಳ ವೇತನ ಬರದೆ, ಜೀವನ ನಡೆಸುವುದೇ ಕಷ್ಟವಾಗಿದೆ. 2 ತಿಂಗಳ ವೇತನ ಬಿಡುಗಡೆ ಮಾಡಲು ಕೂಡಲೆ ಕ್ರಮ ಕೈಗೊಳ್ಳಬೇಕು.

ಮಕ್ಕಳಲ್ಲಿ ಅಪೌಷ್ಠಿಕತೆ ನಿವಾರಣೆ ಮಾಡಲು ಗಣಿಬಾಧಿತ ಪ್ರದೇಶಗಳಲ್ಲಿ ಕಾಳುಗಳನ್ನು ನೀಡುವ ಯೋಜನೆಯಡಿ ಬಿಸಿಯೂಟಕ್ಕೆ ಮಾಸಿಕ ರೂ.500 ನೀಡಲಾಗುತ್ತದೆ. ಈ ಮೊತ್ತವು ಕಡಿಮೆಯಾಗಿದ್ದು ಹೆಚ್ಚಿಸಬೇಕು.ಪ್ರೋತ್ಸಾಹ ಧನ ಹೆಚ್ಚಿಸಬೇಕು.

ಇದಲ್ಲದೆ ಹಿಂದಿನ ಶೈಕ್ಷಣಿಕ ವರ್ಷದ 2-3 ತಿಂಗಳು ಹಾಗೂ ಈ ಶೈಕ್ಷಣಿಕ ವರ್ಷದ 3 ತಿಂಗಳ ಕಾಳಿನ ಮೊತ್ತ ಇನ್ನೂವರೆಗೆ ನೀಡಿಲ್ಲ. ಇನ್ನು ಮುಂದೆ ಈ ಮೊತ್ತವನ್ನು ಮುಖ್ಯ ಗುರುಗಳ ಖಾತೆಯ ಬದಲಿಗೆ ಬಿಸಿಯೂಟ ಕಾರ್ಮಿಕರ ಖಾತೆಗೆ ನೇರವಾಗಿ ಜಮಾ ಮಾಡಬೇಕೆಂಬುದು ಆಗ್ರಹಿಸಿದರು.

ವರ್ಷಗಳಿಂದ ಮೊಟ್ಟೆ ಸುಲಿದ ಹಣವೂ ಬರುತ್ತಿಲ್ಲ. ದಿನವೂ ನೂರಾರು ಮೊಟ್ಟೆ ಸುಲಿದು ಶ್ರಮ ಹಾಕುತ್ತಾರೆ, ಆದರೆ ಅವರ ಶ್ರಮಕ್ಕೆ ತಕ್ಕನಂತ ಪ್ರತಿಫಲ ದೊರೆಯುತ್ತಿಲ್ಲ. ಮೊಟ್ಟೆ ಸುಲಿದ ಹಣ ಮುಖ್ಯ ಗುರುಗಳ ಖಾತೆಗೆ ಹಾಕಲಾಗುತ್ತದೆ. ಆದ-ರೆ ಈ ಹಣ ಬಿಸಿಯೂಟ ಕಾರ್ಮಿಕರಿಗೆ ತಲುಪುತ್ತಿಲ್ಲ. ಈ ಹಿಂದೆ ಸಾಕಷ್ಟು ಬಾರಿ ಸಂಬಂಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದಾಗಲೂ ಯಾವುದೇ ಪ್ರಯೋಜನ ಆಗಿಲ್ಲ.

ಅದಕ್ಕಾಗಿ ಬಿಸಿಯೂಟ ಯೋಜನೆಗೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಹಾಗೂ ಸಂಘದ ಪದಾಧಿಕಾರಿಗಳ ಉಪಸ್ಥಿತಿಯಲ್ಲಿ ಸಭೆ ಕರೆದು, ಬಿಸಿಯೂಟ ಕಾರ್ಮಿಕರ ಸಮಸ್ಯೆಗಳ ಕುರಿತ ವಿಸ್ತ್ರತ ಚರ್ಚೆ ನಡೆಸಬೇಕು ಎಂದು ಆಗ್ರಹಿಸಲಾಯ್ತು.

## ರಹಮಾನಿಯಾ ಮದರಸಾದಲ್ಲಿ ನರೇಂದ್ರ ಮೋದಿ 76ನೇ ಜನ್ಮದಿನಾಚರಣೆ ಸಂಭ್ರಮ:

# ಮೇಣದಬತ್ತಿ ಬೆಳಗಿಸಿ ಪ್ರಧಾನಿಗೆ ಜನ್ಮದಿನದ ಶುಭಾಶಯ ಸಲ್ಲಿಕೆ!

ದಾವಣಗೆರೆ: ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಜಿ ಅವರ 76ನೇ ಜನ್ಮದಿನಾಚರಣೆಯನ್ನು ದಾವಣಗೆರೆ ಜಿಲ್ಲಾ ಭಾರತೀಯ ಜನತಾ ಪಕ್ಷದ ಅಲ್ಪಸಂಖ್ಯಾತ ಮೋರ್ಚಾ ವತಿಯಿಂದ ರಹಮಾನಿಯಾ ಮದರಸಾದಲ್ಲಿ ಅತ್ಯಂತ ಸಂಭ್ರಮ ಮತ್ತು ಸೌಹಾರ್ದಯುತವಾಗಿ ಆಚರಿಸಲಾಯಿತು. ಈ ವಿಶೇಷ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾದ ಜಿಲ್ಲಾ ಅಧ್ಯಕ್ಷ ಗೌತಮ್ ಜೈನ್ ವಹಿಸಿದ್ದರು.

ಕಾರ್ಯಕ್ರಮದ ಅಂಗವಾಗಿ ಮದರಸಾದ ವಿದ್ಯಾರ್ಥಿಗಳು ಸಾಲಾಗಿ ಮೇಣದಬತ್ತಿಗಳನ್ನು ಬೆಳಗಿಸುವ ಮೂಲಕ ಪ್ರಧಾನಿಯವರಿಗೆ ಜನ್ಮದಿನದ ಶುಭಾಶಯ ಕೋರಿದರು. ಇದೇ ವೇಳೆ ಮೋರ್ಚಾ ವತಿಯಿಂದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವಿನ ಭಾಗವಾಗಿ ನೋಟ್‌ಬುಕ್‌ಗಳು, ಪೆನ್ನುಗಳು ಹಾಗೂ ಸಿಹಿ ಹಂಚಲು ಕೇಕ್‌ಗಳನ್ನು ವಿತರಿಸಲಾಯಿತು. ಮದರಸಾದ ಮೌಲಾನಾ ಹಾಗೂ ಅಲ್ಲಿ ನೆರೆದಿದ್ದ ಎಲ್ಲ ಭಾಗವಹಿಸಿದವರಿಗೂ ಕೇಕ್ ನೀಡಿ ಸಂಭ್ರಮ ಹಂಚಿಕೊಳ್ಳಲಾಯಿತು. ಈ ಸಂದರ್ಭದಲ್ಲಿ



ಮಾತನಾಡಿದ ಪದಾಧಿಕಾರಿಗಳು ಹಾಗೂ ಪ್ರಾರ್ಥನೆ ಸಲ್ಲಿಸಿದ ಮೌಲಾನಾ ಅವರು, ನರೇಂದ್ರ ಮೋದಿ ಜಿ ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ದೊರೆಯಲಿ ಹಾಗೂ ದೇಶ ಸೇವೆಗೆ ಇನ್ನಷ್ಟು ಶಕ್ತಿ ಮತ್ತು ಸಾಮರ್ಥ್ಯ ಸಿಗಲಿ ಎಂದು ಪ್ರಾರ್ಥಿಸಿದರು. ಪ್ರಧಾನಿಯವರು ಇದೇ ಸಮರ್ಪಣಾಭಾವದಿಂದ ನಮ್ಮ ಮಹಾನ್ ರಾಷ್ಟ್ರದ ಸೇವೆಯನ್ನು ಮುಂದುವರಿಸಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾದ ರಾಜ್ಯ ಉಪಾಧ್ಯಕ್ಷ ಡಾ. ಸಿ. ಆರ್. ನಸೀರ್ ಅಹಮದ್, ಜಿಲ್ಲಾ ಖಜಾಂಚಿ ಶಮೀರ್ ಆಲಂ, ರಾಜ್ಯ ಸದಸ್ಯ ಟಿಪ್ಪು ಸುಲ್ತಾನ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಕ್ಬಾಲ್ ಅಹಮದ್, ಪ್ರಮುಖ ಮುಖಂಡರಾದ ಮೊಹಮ್ಮದ್ ಸಾದಿಕ್ ಹಾಗೂ ನೇಮಿರಾಜ್ ಸೇರಿದಂತೆ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಒಂದನೇ ಪುಟದಿಂದ..

# ಸ್ಥಳೀಯ ಚುನಾವಣೆಗಳಿಗೆ ಕಾಂಗ್ರೆಸ್ ರಣತಂತ್ರ

ಸರಣಿ ಚುನಾವಣೆಗಳಿಗೆ ಸಜ್ಜಾಗುವ ಪ್ರಯತ್ನದಲ್ಲಿ ಪಕ್ಷ ತೊಡಗಿರುವ ಹಿನ್ನೆಲೆಯಲ್ಲಿ ನಾಯಕರ ಈ ಭೇಟಿ ಮಹತ್ವ ಪಡೆದುಕೊಂಡಿದೆ.

ವಿಶೇಷವಾಗಿ ನೂತನವಾಗಿ ನೇಮಕಗೊಂಡಿರುವ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ತಳಮಟ್ಟದಲ್ಲಿ ಪಕ್ಷದ ಸಂಘಟನಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ಗುರಿಯನ್ನು ಕಾಂಗ್ರೆಸ್ ಹೊಂದಿದೆ.

35 ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರೊಂದಿಗೆ ನಡೆದ ಚಿಂತನ-ಮಂಥನ ಸಭೆಯಲ್ಲಿ ವೇಣುಗೋಪಾಲ್ ಮತ್ತು ಸುರ್ಜೇವಾಲಾ ಅವರು 'ಕಾರ್ಯನಿರ್ವಹಿಸಿ ಇಲ್ಲವೇ ಹಿಂದೆ ಸರಿಯಿರಿ' ಎಂಬ ಸ್ಪಷ್ಟ ಸಂದೇಶ ನೀಡಿದ್ದಾರೆ ಎನ್ನಲಾಗಿದೆ.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಸಜ್ಜಾಗುವಂತೆ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರ ನೇತೃತ್ವದಲ್ಲಿ ಪಕ್ಷದ ಸಂಘಟನೆಯನ್ನು ಬಲಪಡಿಸುವಂತೆ ಸೂಚಿಸಿದ್ದಾರೆ ಎಂದು ತಿಳಿದುಬಂದಿದೆ. 6 ತಿಂಗಳ ಬಳಿಕ ಜಿಲ್ಲಾಧ್ಯಕ್ಷರ ಕಾರ್ಯನಿರ್ವಹಣೆಯನ್ನು ಪರಿಶೀಲಿಸಲಾಗುವುದು ಎಂದು ಅವರು ತಿಳಿಸಿದ್ದಾರೆ ಎನ್ನಲಾಗಿದೆ.

ಅಲ್ಲದೆ, 'ಒಬ್ಬರಿಗೆ ಒಂದು ಹುದ್ದೆ' ತತ್ವವನ್ನು ಪಾಲಿಸುವಂತೆ ಜಿಲ್ಲಾಧ್ಯಕ್ಷರಿಗೆ ಸೂಚಿಸಲಾಗಿದ್ದು, 2028ರ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸುವ ಆಸಕ್ತಿ ಹೊಂದಿರುವವರು ಚುನಾವಣೆಗೆ 6 ತಿಂಗಳ ಮುನ್ನ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ತಿಳಿಸಲಾಗಿದೆ ಎನ್ನಲಾಗಿದೆ.

ವೇಣುಗೋಪಾಲ್ ಮತ್ತು ಸುರ್ಜೇವಾಲಾ ಅವರು ಪ್ರತ್ಯೇಕವಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರನ್ನು ಖಾಸಗಿ ಹೋಟೆಲ್‌ನಲ್ಲಿ ಭೇಟಿಯಾಗಿ ಮಾತುಕತೆ ನಡೆಸಿದರು.

ನಿಗಮ ಮತ್ತು ಮಂಡಳಿಗಳಿಗೆ ಬಾಕಿ ಇರುವ ನೇಮಕಾತಿಗಳು ಹಾಗೂ ಎರಡು ಖಾಲಿ ಸಚಿವ ಸ್ಥಾನಗಳನ್ನು ಭರ್ತಿ ಮಾಡುವ ಕುರಿತು ಸಭೆಗಳಲ್ಲಿ ಚರ್ಚೆ ನಡೆಯಿತು. ಇತ್ತೀಚಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಅವಕಾಶ ವಂಚಿತರಾದ ಕಾಂಗ್ರೆಸ್ ಶಾಸಕರ ಅಸಮಾಧಾನವನ್ನು ಶಮನಗೊಳಿಸುವ ಮಾರ್ಗಗಳ ಬಗ್ಗೆಯೂ ನಾಯಕತ್ವ ಚರ್ಚಿಸಿದೆ ಎಂದು ಮೂಲಗಳು ತಿಳಿಸಿವೆ. ಈ ಪೈಕಿ ಕೆಲವರಿಗೆ ಅವಕಾಶ ಕಲ್ಪಿಸುವ ಕುರಿತು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ನಿರ್ಧಾರ ಕೈಗೊಳ್ಳುವ ಸಾಧ್ಯತೆಯಿದೆ ಎಂದು ಮೂಲಗಳು ಹೇಳಿವೆ.

ಇದೇ ವೇಳೆ ಎಐಸಿಸಿ ನಾಯಕರು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹಾಗೂ ಸಚಿವರಾದ ರಾಮಲಿಂಗಾರೆಡ್ಡಿ, ಬೈರತಿ ಸುರೇಶ್, ಎಂ.ಬಿ. ಪಾಟೀಲ್ ಸೇರಿದಂತೆ ಹಲವು ನಾಯಕರನ್ನೂ ಭೇಟಿಯಾದರು.

ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಒಂದು ಕೋಟಿಗೂ ಅಧಿಕ ಮತದಾರರ ಹೆಸರುಗಳನ್ನು ತೆಗೆದುಹಾಕಿರುವ ಬಗ್ಗೆ ಅವರು ಅಸಮಾಧಾನ ವ್ಯಕ್ತಪಡಿಸಿದ್ದು, ಪಕ್ಷದ ಪ್ರಮುಖ ಮತದಾರರ ಹಿತಾಸಕ್ತಿಗಳನ್ನು ರಕ್ಷಿಸಲು ಸಚಿವರು ಹೆಚ್ಚು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದ್ದಾರೆ ಎನ್ನಲಾಗಿದೆ.

ಇತ್ತೀಚೆಗೆ ಸಿದ್ದರಾಮಯ್ಯ ಅವರು ನವದೆಹಲಿಯಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿ ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಯ ಅನುಷ್ಠಾನ ಸೇರಿದಂತೆ ಹಲವು ವಿಚಾರಗಳ ಕುರಿತು ಚರ್ಚಿಸಿದ್ದ ಬೆನ್ನಲ್ಲೇ ಎಐಸಿಸಿ ನಾಯಕರ ಕರ್ನಾಟಕ ಭೇಟಿ ನಡೆದಿದೆ.

2027ರಲ್ಲಿ ಉತ್ತರ ಪ್ರದೇಶ, ಪಂಜಾಬ್, ಉತ್ತರಾ-ಖಂಡ, ಗೋವಾ, ಮಣಿಪುರ, ಗುಜರಾತ್ ಮತ್ತು ಹಿಮಾಚಲ ಪ್ರದೇಶ ಸೇರಿದಂತೆ ಹಲವು ರಾಜ್ಯಗಳಲ್ಲಿ ವಿಧಾನಸಭಾ ಚುನಾವಣೆಗಳು ನಡೆಯಲಿವೆ. ಈ ರಾಜ್ಯಗಳ ಪೈಕಿ ಕೆಲವು ಕಡೆ ಕರ್ನಾಟಕದ ನಾಯಕರಿಗೆ ಸಂಘಟನಾ ಜವಾಬ್ದಾರಿಗಳನ್ನು ವಹಿಸುವ ಸಾಧ್ಯತೆಯಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಎಐಸಿಸಿ ನಾಯಕರಿಂದ ಪಕ್ಷವನ್ನು ಬೂತ್ ಮಟ್ಟದಿಂದ ಜಿಲ್ಲಾಮಟ್ಟದವರೆಗೆ ಬಲಪಡಿಸುವುದು, ಕಾರ್ಯಕರ್ತರೊಂದಿಗೆ ನಿರಂತರ ಸಂಪರ್ಕದಲ್ಲಿರುವುದು, ಜನರ ಸಮಸ್ಯೆಗಳನ್ನು ಕೈಗೆತ್ತಿಕೊಳ್ಳುವುದು ಹಾಗೂ ಕಾಂಗ್ರೆಸ್ ಕಾರ್ಯಕ್ರಮಗಳು ಮತ್ತು ತತ್ವಗಳನ್ನು ಪ್ರತಿ ಮನೆಗೂ ತಲುಪಿಸುವಂತೆ ಸೂಚನೆ ನೀಡಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಹೇಳಿದ್ದಾರೆ.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಸಿದ್ಧತೆ ನಡೆಸುವಂತೆ ಎಲ್ಲ ಜಿಲ್ಲಾಧ್ಯಕ್ಷರಿಗೂ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

# ರಾಜ್ಯ ಬಿಜೆಪಿ ಬಲವರ್ಧನೆಗೆ ಮಾಸ್ಟರ್ ಪ್ಲ್ಯಾನ್

ಇನ್ನು ಕೆಲವು ಹಾಲಿ ಮತ್ತು ಮಾಜಿ ಶಾಸಕರಂತೂ ವಿಜಯೇಂದ್ರ ವಿರುದ್ಧ ಆಗಾಗ ಅಸಮಾಧಾನ ಹೊರಹಾಕುತ್ತಲೇ ಇರುತ್ತಾರೆ. ಇದರಿಂದ ಮುಂದಿನ 2028ರ ವಿಧಾನಸಭೆ ಚುನಾವಣೆ ಎದುರಿಸುವುದು ಕಷ್ಟಸಾಧ್ಯ ಅನ್ನೋ ಸತ್ಯ ಬಿಜೆಪಿ ಹೈಕಮಾಂಡ್‌ಗೆ ತಿಳಿದಿದೆ. ಹೀಗಾಗಿ ಇದನ್ನ ಸರಿಪಡಿಸಿ ಶತಾಯ ಗತಾಯ ರಾಜ್ಯದಲ್ಲಿ ಮತ್ತೆ ಬಿಜೆಪಿ ತರಬೇಕು ಅಂತಾ ಹೈಕಮಾಂಡ್ ನಿರ್ಧರಿಸಿದೆ. ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ವಿಜಯೇಂದ್ರ ಹೊರತುಪಡಿಸಿ ಬೇರೆಯವರಿಗೆ ಕೊಡುವುದು. ಬಿಜೆಪಿ ಬಿಟ್ಟು ಹೋಗಿರುವ ಹಾಗೂ ಉಚ್ಚಾಟಿತರಾಗಿರುವ ಈಶ್ವರಪ್ಪ, ಬಸನಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಅನೇಕರನ್ನ ಮರಳಿ ಪಕ್ಷಕ್ಕೆ ಕರೆತರಲು ಹೈಕಮಾಂಡ್ ಚಿಂತನೆ ನಡೆಸಿದೆ. ಅಷ್ಟೆ ಅಲ್ಲದೇ ಅನೇಕ ಕಾಂಗ್ರೆಸ್‌ನ ಹಾಲಿ ಶಾಸಕರು, ಮಾಜಿ ಶಾಸಕರನ್ನು ಬಿಜೆಪಿಗೆ ಸೇರಲು ತುದಿಗಾಲಲ್ಲಿ ನಿಂತಿದ್ದಾರೆಂದು ಮಾಜಿ ಸಚಿವ ಮುರಗೇಶ ನಿರಾಣಿ ಬಹಿರಂಗವಾಗಿ ಮಾಧ್ಯಮಗಳಿಗೆ ತಿಳಿಸಿದ್ದಾರೆ. ರಾಜ್ಯದ ಚುಕ್ಕಾಣಿ ಹಿಡಿಯುವುದು ನಂಬರ್ ಗೇಮ್ ಆಗಿದ್ದು, ಬಿಜೆಪಿಯ ಎಲ್ಲ ನಾಯಕರು ಮರಳಿ ಒಟ್ಟಾದ್ರೆ ಇದೇನು ದೊಡ್ಡ ಸಂಖ್ಯೆಯಲ್ಲ. ಅದಕ್ಕಾಗಿ ಈಗಾಗಲೇ ಹೈಕಮಾಂಡ್ ಚಿಂತನೆ ನಡೆಸಿದ್ದು, ಆದಷ್ಟು ಬೇಗ ಈ ಕಾರ್ಯ ನಡೆಯಲಿದೆ ಎಂದು ನಿರಾಣಿ ಹೇಳಿದ್ದಾರೆ. ನಿರಾಣಿ ಈ ಹೇಳಿಕೆಯಿಂದ ಬಿಜೆಪಿ ನಾಯಕರ ಜೊತೆಗೆ ಕಾಂಗ್ರೆಸ್ ನಾಯಕರಲ್ಲಿ ಕೌತುಕ ಮನೆ ಮಾಡಿದೆ.

# ಬಾಣಹಳ್ಳಿಯಲ್ಲಿ ರಾಷ್ಟ್ರೀಯ ಪೋಷಣಾ ಮಾಸಾಚರಣೆ




ಸಂತೇಮರಹಳ್ಳಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಾಮರಾಜನಗರ ಹಾಗೂ ಸಮಗ್ರ ಶಿಶು ಅಭಿವೃದ್ಧಿ ಯೋಜನೆ ಸಂತೇಮರಹಳ್ಳಿ ವತಿಯಿಂದ ಬಾಣಹಳ್ಳಿ ಗ್ರಾಮದಲ್ಲಿ ರಾಷ್ಟ್ರೀಯ ಪೋಷಣಾ ಮಾಸಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಹೇಶ್ ಮಾತನಾಡಿ, ಪೋಷಣ್ ಅಭಿಯಾನದ ಉದ್ದೇಶ ಹಾಗೂ ಮಹತ್ವದ ಕುರಿತು ಮಾಹಿತಿ ನೀಡಿದರು. ಉಪನಿರ್ದೇಶಕಿ ಸುಭದ್ರಾದೇವಿ ಮಾತನಾಡಿ, ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳಲ್ಲಿ ರಕ್ತಹೀನತೆ ತಡೆಗಟ್ಟುವುದು, ಪೌಷ್ಟಿಕ ಆಹಾರ, ವೈಯಕ್ತಿಕ ಸ್ವಚ್ಛತೆ ಮತ್ತು ಆರೋಗ್ಯ ಕಾಳಜಿಯ ಕುರಿತು ಜಾಗೃತಿ ಮೂಡಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪುಟ್ಟಸ್ವಾಮಿ ಮಹಿಳೆಯರಿಗೆ ಸಂಬಂಧಿಸಿದ ಕಾನೂನು ಹಾಗೂ ಕಾಯ್ದೆಗಳ ಕುರಿತು ಮಾಹಿತಿ ನೀಡಿದರು. ಜಿಲ್ಲಾ ನಿರೂಪಣಾಧಿಕಾರಿ ಮಂಜುಳಾ ಅವರು ಪ್ರತಿ ಮನೆಯಲ್ಲೂ ಕೈತೋಟ ಬೆಳೆಸುವುದು, ಬಾಲ್ಯವಿವಾಹ ತಡೆ, ಪೋಕ್ಸೋ ಕಾಯ್ದೆ, ಮೊಬೈಲ್ ಬಳಕೆ ಹಾಗೂ ಮಕ್ಕಳ ಸಹಾಯವಾಣಿ 1098 ಕುರಿತು ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಮತಾ ಕುಮಾರಿ, ಅಂಗನವಾಡಿ ಮೇಲ್ವಿಚಾರಕಿ ಕಲಾವತಿ, ಜೆಂಡರ್ ಸ್ಪೆಷಲಿಸ್ಟ್ ತ್ರಿವೇಣಿ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು ಹಾಗೂ ಬಾಣಹಳ್ಳಿ ಗ್ರಾಮಸ್ಥರು ಭಾಗವಹಿಸಿದ್ದರು.

# ಡಾ. ಸುರೇಶ್ ನೆಗಳಗುಳಿಗೆ "ಕಾಸರಗೋಡು ದಸರಾ ಕವಿ ಶ್ರೇಷ್ಠ ರಾಷ್ಟ್ರೀಯ ಪ್ರಶಸ್ತಿ"

ಕಾಸರಗೋಡು: ಖ್ಯಾತ ಕವಿ ಹಾಗೂ ಗಝಲ್ ಕವಿ ಡಾ. ಸುರೇಶ್ ನೆಗಳಗುಳಿ ಅವರು 'ಕಾಸರಗೋಡು ದಸರಾ ಕವಿ ಶ್ರೇಷ್ಠ ರಾಷ್ಟ್ರೀಯ ಪ್ರಶಸ್ತಿ–2026'ಕ್ಕೆ ಆಯ್ಕೆಯಾಗಿದ್ದಾರೆ.



ಕಾಸರಗೋಡು ಪಾಂಗೋಡು ಶ್ರೀ ದುರ್ಗಾಪರಮೇಶ್ವರಿ ಸುಬ್ರಮಣ್ಯ ದೇವಸ್ಥಾನದ ದಸರಾ ವೇದಿಕೆಯಲ್ಲಿ ಅ.11ರಿಂದ 20ರವರೆಗೆ ನಡೆಯಲಿರುವ 'ಕಾಸರಗೋಡು ದಸರಾ ಸಾಂಸ್ಕೃತಿಕೋತ್ಸವ–2026'ರ ಅಂಗವಾಗಿ ಅ.18ರಂದು ಬೆಳಗ್ಗೆ 11 ಗಂಟೆಗೆ 'ಕಾಸರಗೋಡು ದಸರಾ ಕವಿ ಸಮ್ಮೇಳನ' ಆಯೋಜಿಸಲಾಗಿದೆ. ಇದೇ ಸಂದರ್ಭದಲ್ಲಿ ಡಾ. ಸುರೇಶ್ ನೆಗಳಗುಳಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು.

ಸಾಹಿತ್ಯ ಸಂಘಟಕ ಬಿ. ಶ್ರೀನಿವಾಸ್ ಬಹಾದ್ದೂರ್ ಅವರ ಸರ್ವಾಧ್ಯಕ್ಷತೆಯಲ್ಲಿ ನಡೆಯುವ ಕವಿ ಸಮ್ಮೇಳನವನ್ನು ಚುಟುಕು ಬ್ರಹ್ಮ ಹಾಗೂ ಚುಟುಕು ಸಾಹಿತ್ಯ ಪರಿಷತ್ ಸಂಸ್ಥಾಪಕ ಡಾ. ಎಂ.ಜಿ.ಆರ್. ಅರಸ್ ಮೈಸೂರು ಉದ್ಘಾಟಿಸಲಿದ್ದಾರೆ. ಖ್ಯಾತ ಕವಿ ಜಯಪ್ಪ ಹೊನ್ನಾಳಿ ಅವರ ಅಧ್ಯಕ್ಷತೆಯಲ್ಲಿ ಕವಿಗೋಷ್ಠಿ ನಡೆಯಲಿದೆ.

ರಾಷ್ಟ್ರಮಟ್ಟದ ಸುಮಾರು 75 ಕವಿಗಳು ಭಾಗವಹಿಸಲಿರುವ ಸಮ್ಮೇಳನದಲ್ಲಿ 21 ಮಂದಿ ಕವಿಗಳಿಗೆ 'ಕಾಸರಗೋಡು ದಸರಾ ಕವಿ ಶ್ರೇಷ್ಠ ರಾಷ್ಟ್ರೀಯ ಪ್ರಶಸ್ತಿ–2026' ನೀಡಿ ಗೌರವಿಸಲಾಗುವುದು ಎಂದು ದಸರಾ ಸಂಚಾಲಕ ಹಾಗೂ ಕನ್ನಡ ಭವನದ ಸ್ಥಾಪಕ ಅಧ್ಯಕ್ಷ ಡಾ. ವಾಮನ್ ರಾವ್ ಬೇಕಲ್ ಮತ್ತು ಪಾಂಗೋಡು ದೇವಸ್ಥಾನದ ಸಾಂಸ್ಕೃತಿಕ ಘಟಕದ ಅಧ್ಯಕ್ಷ ಪಾಂಗೋಡು ಪ್ರವೀಣ್ ನಾಯಕ್ ತಿಳಿಸಿದ್ದಾರೆ.

# ಡಿಸೆಂಬರ್ 2026ರೊಳಗೆ ಪಂಚಾಯತ್ ಚುನಾವಣೆ: ಸಂಪುಟ ನಿರ್ಧಾರ

ಬೆಂಗಳೂರು: ರಾಜ್ಯದಲ್ಲಿ ಗ್ರಾಮ ಪಂಚಾಯತ್ ಸೇರಿದಂತೆ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣೆಗಳನ್ನು ಡಿಸೆಂಬರ್ 2026ರೊಳಗೆ ನಡೆಸಲು ರಾಜ್ಯ ಸಚಿವ ಸಂಪುಟ ನಿರ್ಧಾರ ಕೈಗೊಂಡಿದೆ. ಚುನಾವಣೆಯಲ್ಲಿ ಎಲೆಕ್ಟ್ರಾನಿಕ್ ಮತಯಂತ್ರ ಬದಲಿಗೆ ಬ್ಯಾಲೆಟ್ ಪೇಪರ್ ಮೂಲಕ ಮತದಾನ ನಡೆಸಲು ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಈ ಹಿನ್ನೆಲೆಯಲ್ಲಿ ಅಗತ್ಯವಿರುವ ಬ್ಯಾಲೆಟ್ ಪೇಪರ್‌ಗಳನ್ನು ಖರೀದಿಸಲು 151.31 ಕೋಟಿ ಅನುದಾನಕ್ಕೆ ಅನುಮೋದನೆ ನೀಡಲಾಗಿದೆ. ಪಂಚಾಯತ್ ಸಂಸ್ಥೆಗಳ ಚುನಾವಣೆಗಳನ್ನು ನಿಗದಿತ ಅವಧಿಯೊಳಗೆ ನಡೆಸುವ ನಿಟ್ಟಿನಲ್ಲಿ ಸರ್ಕಾರ ಈ ನಿರ್ಧಾರ ಕೈಗೊಂಡಿದೆ. ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸುವುದರಿಂದ ಮತದಾನ ಪ್ರಕ್ರಿಯೆಗೆ ಅಗತ್ಯವಿರುವ ಮುದ್ರಣ, ಸಾಗಣೆ, ಭದ್ರತೆ ಸೇರಿದಂತೆ ವಿವಿಧ ವ್ಯವಸ್ಥೆಗಳನ್ನು ಚುನಾವಣಾ ಆಯೋಗದ ಮಾರ್ಗಸೂಚಿಗಳಂತೆ ಕೈಗೊಳ್ಳಬೇಕಾಗಲಿದೆ. ಡಿಸೆಂಬರ್ 2026ರೊಳಗೆ ಚುನಾವಣೆ ಪೂರ್ಣಗೊಳಿಸುವ ಉದ್ದೇಶದಿಂದ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲು ಸಂಬಂಧಿಸಿದ ಇಲಾಖೆಗಳು ಮುಂದಾಗಲಿವೆ.

# ಭಾರತೀಯ ವಾಯುಪಡೆಗೆ ಹೆಚ್‌ಎಎಲ್‌ನ ಸ್ವದೇಶಿ ಬಲ : ಯುದ್ಧ ವಿಮಾನಗಳ ಹಸ್ತಾಂತರ

ಬೆಂಗಳೂರು: ದೇಶದ ಹೆಮ್ಮೆಯ ವೈಮಾನಿಕ ಸಂಸ್ಥೆ ಬೆಂಗಳೂರಿನ ಹೆಚ್‌ಎಎಲ್ ಮತ್ತೊಂದು ಮೈಲಿಗಲ್ಲು ಸಾಧಿಸಿದೆ. ಹೆಚ್‌ಎಎಲ್ ಸಂಸ್ಥೆ ತಯಾರಿಸಿದ 2 ಎಲ್‌ಸಿಎ ತೇಜಸ್, ಎಫ್‌ಓಸಿ ಟ್ವಿನ್ ಸೀಟರ್ ಟ್ರೈನರ್, ಹೆಚ್‌ಟಿಟಿ–40 ಬೇಸಿಕ್ ಟ್ರೈನರ್ ವಿಮಾನಗಳು, 4 ಧ್ರುವ್ ನೆಕ್ಸ್ಟ್ ಜನರೇಷನ್ ಯುದ್ಧ ಹೆಲಿಕಾಪ್ಟರ್‌ಗಳನ್ನು ಭಾರತೀಯ ವಾಯುಪಡೆಗೆ ಹಸ್ತಾಂತರ ಮಾಡಲಾಗಿದೆ.




ಹೆಚ್‌ಎಎಲ್ ವಿಮಾನ ನಿಲ್ದಾಣದಲ್ಲಿ ಆಯೋಜನೆಯಾಗಿದ್ದ ಕಾರ್ಯಕ್ರಮದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಹಾಗೂ ವಾಯುಪಡೆಯ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಎಪಿ ಸಿಂಗ್ ಭಾಗಿಯಾಗಿದ್ದರು. ಆತ್ಮನಿರ್ಭರ ಭಾರತ ಮತ್ತು ಮೇಕ್ ಇನ್ ಇಂಡಿಯಾ ಯೋಜನೆಗೆ ಮತ್ತಷ್ಟು ಬಲ ಖಾಸಗಿ ಸಂಸ್ಥೆಗೂ (ಪವನ್ ಹನ್ಸ್) ಧ್ರುವ್ ನೆಕ್ಸ್ಟ್ ಜನರೇಷನ್ (ಎನ್‌ಜಿ) ಹೆಲಿಕಾಪ್ಟರ್‌ಗಳ ಹಸ್ತಾಂತರ ಮಾಡಲಾಗಿದೆ. ಲಘು ಯುದ್ಧ ವಿಮಾನಗಳ ಹಸ್ತಾಂತರಕ್ಕೂ ಮುನ್ನ ವಿಘ್ನ ವಿನಾಯಕ ಹಾಗೂ ಶ್ರೀರಾಮನಿಗೆ ಪೂಜೆ ನೆರವೇರಿಸಲಾಯಿತು.

ಬಳಿಕ ಧ್ರುವ್ ಎನ್‌ಜಿ ಹೆಲಿಕಾಪ್ಟರ್‌ನ್ನು ಹತ್ತಿದ ರಾಜನಾಥ್ ಸಿಂಗ್ ಹಾಗೂ ರಾಮ್ ಮೋಹನ್ ನಾಯ್ಡು ಪರಿಶೀಲಿಸಿದರು.

ವಾಯುಪಡೆಯು 6,838 ಕೋಟಿ ಮೊತ್ತದ 70 ಹೆಚ್‌ಎಎಲ್ ಹೆಚ್‌ಟಿಟಿ–40 (ಹಿಂದೂಸ್ಥಾನ್ ಟರ್ಬೋ ಟ್ರೈನರ್) ವಿಮಾನಗಳಿಗಾಗಿ ಒಪ್ಪಂದ ಮಾಡಿಕೊಂಡಿದೆ.

# ಜನಾರ್ದನ ರೆಡ್ಡಿ ಹೇಳಿಕೆಗೆ ಭರತ್ ರೆಡ್ಡಿ ತಿರುಗೇಟು




– 1ನೇ ಪುಟದಿಂದ....

ಸಾವಿರ ಮಾತುಗಳಿಗೆ ಒಂದೇ ಉತ್ತರ ಸಿಗಲಿದೆ. ಆ ಉತ್ತರವನ್ನು ಜನರೇ ನೀಡಲಿದ್ದಾರೆ. ಸದ್ಯ ತಮ್ಮ ಗಮನ ಬಳ್ಳಾರಿ ನಗರದ ಅಭಿವೃದ್ಧಿಯತ್ತ ಮಾತ್ರವಿದ್ದು, ಇಂತಹ ರಾಜಕೀಯ ಆರೋಪ–ಪ್ರತ್ಯಾರೋಪಗಳಿಗೆ ಹೆಚ್ಚಿನ ಆದ್ಯತೆ ನೀಡುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಸಾವಿರ ಮಾತುಗಳಿಗೆ ಒಂದೇ ಉತ್ತರ ಸಿಗಲಿದೆ. ಅದು ಜನರ ಬಾಯಿಂದಲೇ ಬರಲಿದೆ. ಜನರ ಮನಸ್ಸು ಗೆಲ್ಲುವುದೇ ತಮ್ಮ ಗುರಿಯಾಗಿದ್ದು, ಬಳ್ಳಾರಿಯ ಅಭಿವೃದ್ಧಿಯತ್ತ ಮಾತ್ರ ಗಮನ ಹರಿಸುವುದಾಗಿ ಭರತ್ ರೆಡ್ಡಿ ಸ್ಪಷ್ಟಪಡಿಸಿದರು.

ಬಳ್ಳಾರಿಯಲ್ಲಿ ಮಹರ್ಷಿ ವಾಲ್ಮೀಕಿ ಅವರ ಪುತ್ಥಳಿಯನ್ನು ದೊಡ್ಡ ಮಟ್ಟದಲ್ಲಿ ಉದ್ಘಾಟನೆ ಮಾಡುವುದಾಗಿ ಶಾಸಕ ಭರತ್ ರೆಡ್ಡಿ ತಿಳಿಸಿದರು. ವಿಧಾನಸಭೆ ಅಧಿವೇಶನದ ಸಂದರ್ಭದಲ್ಲಿ ಈ ಕುರಿತು ಮುಹೂರ್ತ ನಿಗದಿಪಡಿಸಲಾಗುವುದು ಎಂದರು.

ಇಷ್ಟು ವರ್ಷಗಳಿಂದ ನಗರದಲ್ಲಿ ನಿರೀಕ್ಷಿತ ಮಟ್ಟದ ನಗರಾಭಿವೃದ್ಧಿ ಆಗಿಲ್ಲ. ಇನ್ನು ಮುಂದೆ ಅಭಿವೃದ್ಧಿ ಹೊಂದಿದ ಬಳ್ಳಾರಿಯನ್ನು ಜನರು ನೋಡಲಿದ್ದಾರೆ. ಬಳ್ಳಾರಿಯ ಅಭಿವೃದ್ಧಿ ಮಾಡುವುದು ತಮ್ಮ ಪ್ರಮುಖ ಗುರಿಯಾಗಿದೆ ಎಂದು ಹೇಳಿದರು. ಆಡಳಿತ ಯಂತ್ರವನ್ನು ಮತ್ತಷ್ಟು ಚುರುಕುಗೊಳಿಸುವ ಉದ್ದೇಶದಿಂದ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಗುರುವಾರ ಬೆಳಿಗ್ಗೆ ಬಳ್ಳಾರಿ ತಾಲೂಕು ತಹಶೀಲ್ದಾರ್ ಕಚೇರಿಗೆ ದಿಢೀರ್ ಭೇಟಿ ನೀಡಿ, ಅಧಿಕಾರಿಗಳ ಕಾರ್ಯವೈಖರಿ ಹಾಗೂ ಸಾರ್ವಜನಿಕರ ಸಮಸ್ಯೆಗಳ ಕುರಿತು ಪರಿಶೀಲನೆ ನಡೆಸಿದರು.


ಕಚೇರಿಗೆ ಭೇಟಿ ನೀಡಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅಧಿಕಾರಿಗಳು ಉತ್ತಮವಾಗಿ ಕೆಲಸ ಮಾಡುತ್ತಿದ್ದಾರೆ. ಆದರೆ ಕೆಲವರು ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುತ್ತಿದ್ದಾರೆ. ಅಂತಹ ಅಧಿಕಾರಿಗಳಿಗೆ ಚುರುಕು ಮುಟ್ಟಿಸುವ ಕೆಲಸ ಮಾಡಲಾಗುವುದು ಎಂದು ಹೇಳಿದರು. ಮುಖ್ಯಮಂತ್ರಿಗಳು ಅಧಿಕಾರಿಗಳು ಜನರ ನಡುವೆ ಇದ್ದುಕೊಂಡು ಕೆಲಸ ಮಾಡಬೇಕು ಎಂದು ಸೂಚಿಸಿದ್ದಾರೆ. ಸರ್ಕಾರದ ಸೇವೆಗಳು ಜನರ ಮನೆ ಬಾಗಿಲಿಗೆ ತಲುಪಬೇಕು ಎಂಬುದು ಸರ್ಕಾರದ ಆಶಯವಾಗಿದೆ. ಚುನಾವಣೆ ಸಂದರ್ಭದಲ್ಲಿ ಜನಪ್ರತಿನಿಧಿಗಳು ಯಾವ ರೀತಿ ಜನರ ಮನೆಗಳಿಗೆ ತೆರಳಿ ಅವರನ್ನು ಭೇಟಿ ಮಾಡುತ್ತಾರೋ, ಅದೇ ರೀತಿಯಲ್ಲಿ ಅಧಿಕಾರಿಗಳೂ ಜನರ ಬಳಿಗೆ ತೆರಳಿ ಸೇವೆ ನೀಡಬೇಕು ಎಂದು ಭರತ್ ರೆಡ್ಡಿ ಹೇಳಿದರು.

ಪಿಂಚಣಿ ವಿಳಂಬದ ಬಗ್ಗೆ ಪರಿಶೀಲನೆ

ತಾಲೂಕು ಕಚೇರಿಯಲ್ಲಿ ವೃದ್ಧಾಪ್ಯ ವೇತನ, ವಿಧವಾ ವೇತನ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಪಿಂಚಣಿಗಳು ವಿಳಂಬವಾಗುತ್ತಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಬಂದಿದ್ದವು. ಅಲ್ಲದೆ ಸರ್ವರ್ ಸಮಸ್ಯೆಯೂ ಇರುವ ಹಿನ್ನೆಲೆಯಲ್ಲಿ ಅಧಿಕಾರಿಗಳೊಂದಿಗೆ ಈ ಕುರಿತು ಪರಿಶೀಲನೆ ನಡೆಸಲಾಗಿದೆ. ಮುಂದಿನ ದಿನಗಳಲ್ಲಿ ಇಂತಹ ಸಮಸ್ಯೆಗಳು ಮರುಕಳಿಸದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇನ್ನು ಮುಂದೆ ಎರಡು ದಿನಕ್ಕೊಮ್ಮೆ ತಾಲೂಕು ಕಚೇರಿಗೆ ಭೇಟಿ ನೀಡುವುದಾಗಿ ಹೇಳಿದ ಶಾಸಕ, ತಾಲೂಕು ಕಚೇರಿ ಮಾತ್ರವಲ್ಲದೆ ವಿವಿಧ ಸರ್ಕಾರಿ ಕಚೇರಿಗಳಿಗೂ ಭೇಟಿ ನೀಡಿ ಅಧಿಕಾರಿಗಳ ಕಾರ್ಯವೈಖರಿ ಪರಿಶೀಲಿಸುವುದಾಗಿ ಹೇಳಿದರು.

# ಭದ್ರಾ ಕೊನೆ ಭಾಗಕ್ಕೆ ನೀರು: ಡಾ. ಪ್ರಭಾ ಸೂಚನೆ





ದಾವಣಗೆರೆ: ಭದ್ರಾ ಅಚ್ಚುಕಟ್ಟು ಪ್ರದೇಶದ ನಮ್ಮ ರೈತರ ಹಿತರಕ್ಷಣೆ ಹಾಗೂ ಪ್ರತಿಯೊಂದು ಎಕರೆ ಕೃಷಿ ಭೂಮಿಗೆ ಸಮರ್ಪಕವಾಗಿ ನೀರು ತಲುಪಿಸುವುದು ನಮ್ಮ ಮೊದಲ ಆದ್ಯತೆಯಾಗಿದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಹೇಳಿದ್ದಾರೆ. ಭೂಪಟಡೌನ್‌ಲೋಡ್ ಮಾಡಿ

ಇಂದು ಗೃಹ ಕಚೇರಿಯಲ್ಲಿ ಭದ್ರಾ ಇಂಜಿನಿಯರ್ ಅವರೊಂದಿಗೆ ಸಭೆ ನಡೆಸಿದರು. ಭದ್ರಾ ಅಚ್ಚುಕಟ್ಟು ಪ್ರದೇಶದ ನೀರು ಹಂಚಿಕೆ, ನಾಲೆಗಳ ನಿರ್ವಹಣೆ ಹಾಗೂ ಕೊನೆಯ ಭಾಗದ (ಟೇಲ್ ಎಂಡ್) ವರೆಗೂ ನೀರು ತಲುಪಿ ಎಲ್ಲಾ ಕೆರೆಗಳು ತುಂಬುವ ವ್ಯವಸ್ಥೆಯಾಗಬೇಕೆಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಕೊನೆಯ ಭಾಗದ ರೈತರನ್ನು ಭೇಟಿ ಮಾಡಿ ಅವರ ಅಹವಾಲುಗಳನ್ನು ಆಲಿಸಿದ ಅವರು ಪ್ರಸ್ತುತ ಭದ್ರಾ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಹರಿಯಲು ಬಿಡಲಾಗಿದ್ದರೂ, ವಿವಿಧ ಜೋನ್‌ಗಳು ಹಾಗೂ ನಾಲೆಗಳ ನಿರ್ವಹಣೆಯ ಕೊರತೆಯಿಂದಾಗಿ ಹರಿಹರ, ಸೂಳೆಕೆರೆ ಸೇರಿದಂತೆ ಕೊನೆಯ ಭಾಗದ ಜಮೀನುಗಳಿಗೆ ನೀರು ತಲುಪುವಲ್ಲಿ ವ್ಯತ್ಯಾಸವಾಗುತ್ತಿರುವುದು ಗಮನಕ್ಕೆ ಬಂದಿದೆ ಎಂದು ತಿಳಿಸಿದರು. ಈ ಸಮಸ್ಯೆಯನ್ನು ತಕ್ಷಣವೇ ಬಗೆಹರಿಸುವ ನಿಟ್ಟಿನಲ್ಲಿ ಅಧಿಕಾರಿಗಳೊಂದಿಗೆ ದೂರವಾಣಿ ಮೂಲಕ ಚರ್ಚಿಸಿ, ಪ್ರಥಮ ಆದ್ಯತೆಯಾಗಿ ನೀರು ನೇರವಾಗಿ ಕೊನೆಯ ಭಾಗದ (ಟೇಲ್ ಎಂಡ್) ರೈತರ ಜಮೀನುಗಳಿಗೆ ತಲುಪುವಂತೆ ಸ್ಪಷ್ಟ ಸೂಚನೆ ನೀಡಲಾಗಿದೆ ಎಂದು ಹೇಳಿದರು.

ನೀರು ಸಂಪೂರ್ಣವಾಗಿ ಕೊನೆಯ ಹಂತದವರೆಗೆ ತಲುಪಿದ ನಂತರವಷ್ಟೇ ಇತರ ಗೇಟ್‌ಗಳನ್ನು ತೆರೆಯುವಂತೆ ಹಾಗೂ ನೀರು ನಿರ್ವಹಣೆಯನ್ನು ಸಮರ್ಪಕವಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ಜೊತೆಗೆ ನಮ್ಮ ವ್ಯಾಪ್ತಿಯ ಪ್ರಮುಖ ಕೆರೆಗಳನ್ನು ಶೀಘ್ರವಾಗಿ ತುಂಬಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಗಿದೆ ಎಂದು ಮಾಹಿತಿ ನೀಡಿದರು

# ತೊಳಹುಣಸೆ ಯಾರ್ಡ್ ಕಾಮಗಾರಿ: ಸೆ.21ರಿಂದ ರೈಲು ಸಂಚಾರದಲ್ಲಿ ಬದಲಾವಣೆ

ಬಳ್ಳಾರಿ: ತುಮಕೂರು–ದಾವಣಗೆರೆ ಹೊಸ ಬ್ರಾಡ್‌ಗೇಜ್ (ಬಿಜಿ) ಮಾರ್ಗಕ್ಕೆ ಸಂಬಂಧಿಸಿದಂತೆ ತೊಳಹುಣಸೆ ಯಾರ್ಡ್‌ನಲ್ಲಿ ಸಂಪರ್ಕ ಜೋಡಣೆ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಸೆ.21ರಿಂದ ಅ.13ರವರೆಗೆ ವಿವಿಧ ರೈಲುಗಳ ಸಂಚಾರದಲ್ಲಿ ಬದಲಾವಣೆ ಮಾಡಲಾಗಿದೆ. ಕೆಲವು ರೈಲುಗಳನ್ನು ಸಂಪೂರ್ಣವಾಗಿ ರದ್ದುಪಡಿಸಲಾಗಿದ್ದು, ಕೆಲವು ರೈಲುಗಳ ಸಂಚಾರವನ್ನು ಭಾಗಶಃ ರದ್ದು, ಮಾರ್ಗ ಬದಲಾವಣೆ, ತಡವಾಗಿ ಸಂಚಾರ ಹಾಗೂ ಮಾರ್ಗಮಧ್ಯೆ ನಿಯಂತ್ರಿಸುವ ಕ್ರಮ ಕೈಗೊಳ್ಳಲಾಗಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

ಎರಡು ದಿನ ರೈಲು ಸಂಚಾರ ರದ್ದು

ರೈಲು ಸಂಖ್ಯೆ 16214 ಎಸ್‌ಎಸ್‌ಎಸ್ ಹುಬ್ಬಳ್ಳಿ–ಅರಸೀಕೆರೆ ಡೈಲಿ ಎಕ್ಸ್‌ಪ್ರೆಸ್ ರೈಲನ್ನು ಅ.8 ಮತ್ತು 9ರಂದು ರದ್ದುಪಡಿಸಲಾಗುತ್ತದೆ. ರೈಲು ಸಂಖ್ಯೆ 16213 ಅರಸೀಕೆರೆ–ಎಸ್‌ಎಸ್‌ಎಸ್ ಹುಬ್ಬಳ್ಳಿ ಡೈಲಿ ಎಕ್ಸ್‌ಪ್ರೆಸ್ ರೈಲನ್ನು ಅ.9 ಮತ್ತು 10ರಂದು ರದ್ದುಪಡಿಸಲಾಗುತ್ತದೆ.

ಸಿದ್ಧಗಂಗಾ ಸೇರಿದಂತೆ ಹಲವು ರೈಲುಗಳ ಭಾಗಶಃ ರದ್ದು : ರೈಲು ಸಂಖ್ಯೆ 12725 ಬೆಂಗಳೂರು–ಧಾರವಾಡ ಸಿದ್ಧಗಂಗಾ ಡೈಲಿ ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ಸೆ.22, 23, 27 ಹಾಗೂ ಅ.1, 2, 3, 6, 7, 8 ಮತ್ತು 9ರಂದು ಬೀರೂರು–ಧಾರವಾಡ ನಡುವೆ ಭಾಗಶಃ ರದ್ದಾಗಲಿದೆ.

# ವಿಕಸಿತ ಭಾರತ್ ಯಂಗ್ ಲೀಡರ್ಸ್ ಡೈಲಾಗ್–2027 ಪರಿಣಾಮಕಾರಿ ಅನುಷ್ಠಾನಕ್ಕೆ ಸಮನ್ವಯ ಅಗತ್ಯ–ಡಿಸಿ



ಹಾವೇರಿ : ವಿಕಸಿತ ಭಾರತ್ ಯಂಗ್ ಲೀಡರ್ಸ್ ಡೈಲಾಗ್–2027ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಜಿಲ್ಲೆಯ ಸಂಬಂಧಿಸಿದ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸುವ ಮೂಲಕ 15 ರಿಂದ 29 ವರ್ಷ ವಯೋಮಾನದ ಅರ್ಹ ಯುವಜನರು ಕ್ವಿಜ್, ಪ್ರಬಂಧ ಹಾಗೂ ಸಂಸ್ಕೃತಿಕ ಚಟುವಟಿಕೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಿಕೆಗೆ ಅಗತ್ಯ ಸಹಕಾರ ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನರ ಹೇಳಿದರು. ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಮೈ ಭಾರತ ಜಿಲ್ಲಾ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು, ಮೈ ಭಾರತ್ ಕಾರ್ಯಕ್ರಮದ ಮೂಲಕ ಯುವ ಜನರಲ್ಲಿ ನಾಯಕತ್ವ ಮತ್ತು ಸಾಮರ್ಥ್ಯ ವ್ಯಕ್ತ ಪಡಿಸಲು ವಿಕಸಿತ ಭಾರತ್ ಯಂಗ್ ಲೀಡರ್ಸ್ ಡೈಲಾಗ್–2027 ಸೂಕ್ತ ವೇದಿಕೆ ಕಲ್ಪಿಸಿದೆ ಜಿಲ್ಲೆಯ ಯುವ ಸಮೂಹ ಈ ಅವಕಾಶವನ್ನು ಉಪಯೋಗಿಸಿಕೊಂಡು ತಮ್ಮ ಸಾಮರ್ಥ್ಯವನ್ನು ಸಾಬೀತುಪಡಿಸಿಕೊಳ್ಳಬೇಕು ಎಂದರು. ಜಿಲ್ಲೆಯಲ್ಲಿರುವ ಶಾಲೆ, ಪದವಿಪೂರ್ವ ಕಾಲೇಜು, ಪದವಿ/ಸ್ನಾತಕೋತ್ತರ ಕಾಲೇಜು, ವಿಶ್ವ ವಿದ್ಯಾಲಯ, ಯುವಜನ ಸಂಘಟನೆಗಳು, ರೆಡ್ ಕ್ರಾಸ್, ಕ್ರೀಡಾ ಸಂಸ್ಥೆಗಳು, ಎನ್ ಸಿಸಿ, ಹಾಗೂ ವಿವಿಧ ಇಲಾಖೆಗಳ ಮೂಲಕ ಅರ್ಹ 15 ರಿಂದ 29 ವರ್ಷದ ಯುವಜನರಿಗೆ ಕ್ವಿಜ್, ಪ್ರಬಂಧ ಹಾಗೂ ಸಂಸ್ಕೃತಿಕ ಚಟುವಟಿಕೆ ಕಾರ್ಯಕ್ರಮ ಹಮ್ಮಿಕೊಂಡಿರುವ ಕುರಿತು ಮಾಹಿತಿ ತಲುಪಿಸಬೇಕು. ಶಿಕ್ಷಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸೇರಿದಂತೆ ಸಂಬಂಧಿಸಿದ ಇಲಾಖೆಗಳು ತಮ್ಮ ವ್ಯಾಪ್ತಿಯಲ್ಲಿನ ಶಿಕ್ಷಣ ಸಂಸ್ಥೆಗಳು ಮತ್ತು ಯುವಜನ ಸಂಘಟನೆಗಳೊಂದಿಗೆ ಸಮನ್ವಯ ಸಾಧಿಸಿ ಗ್ರಾಮೀಣ ಹಾಗೂ ನಗರ ಪ್ರದೇಶಗಳ ಯುವಜನರೂ ಸಮಾನವಾಗಿ ಭಾಗವಹಿಸುವಂತೆ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದರು.

ಮೈ ಭಾರತ ಜಿಲ್ಲಾ ಯುವ ಅಧಿಕಾರಿ ಶರಣ್ಯ ಬಿ ಅವರು ಮಾತನಾಡಿ, ಮೈ ಭಾರತ ವತಿಯಿಂದ ಕ್ವಿಜ್, ಪ್ರಬಂಧ ಹಾಗೂ ಸಂಸ್ಕೃತಿಕ ಚಟುವಟಿಕೆ ಕಾರ್ಯಕ್ರಮಗಳನ್ನು ಆಯೋಜಿಸಿದೆ. ಆ.17 ರಿಂದ ಸೆ.30 ರ ವರೆಗೆ ಆನ್‌ಲೈನ್‌ನಲ್ಲಿ ನಡೆಯುವ ಕ್ವಿಜ್‌ನಲ್ಲಿ 15 ರಿಂದ 29 ವರ್ಷದೊಳಗಿನ ಎಲ್ಲಾ ಯುವಕ–ಯುವತಿಯರು ಭಾಗವಹಿಸಬಹುದಾಗಿದೆ. ಮೊದಲ ಹಂತವಾದ ಕ್ವಿಜ್ (ಕಿಣುದ) ಸ್ಪರ್ಧೆಯಲ್ಲಿ ಭಾಗವಹಿಸಲು ಸೆಪ್ಟೆಂಬರ್ 30 ಕೊನೆಯ ದಿನವಾಗಿದೆ ಜಿಲ್ಲೆಯ ಯುವಕರು ಯಾವುದೇ ವಿಳಂಬ ಮಾಡದೆ ನೋಂದಣಿ ಮಾಡಿಕೊಂಡು ಕ್ವಿಜ್‌ನಲ್ಲಿ ಭಾಗವಹಿಸಬೇಕು. ಒಂದು ಕ್ವಿಜ್‌ನಿಂದ ಆರಂಭವಾಗುವ ಈ ಪ್ರಯಾಣವು ಜಿಲ್ಲಾ, ರಾಜ್ಯ ಹಾಗೂ ರಾಷ್ಟ್ರಮಟ್ಟದ ವೇದಿಕೆಯವರೆಗೆ ಕೊಂಡೊಯ್ಯುವ ಅವಕಾಶವಾಗಿದ್ದು, ಯುವಕರ ಆಲೋಚನೆಗಳು 2047ರ ವಿಕಸಿತ ಭಾರತದ ನಿರ್ಮಾಣಕ್ಕೆ ಕೊಡುಗೆ ನೀಡಲು ವಿಕಸಿತ ಭಾರತ್ ಯಂಗ್ ಲೀಡರ್ಸ್ ಡೈಲಾಗ್ ಮಹತ್ವದ ವೇದಿಕೆಯಾಗಿದೆ ಜಿಲ್ಲೆಯ ಯುವ ಜನರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಂಡು ಕ್ವಿಜ್, ಪ್ರಬಂಧ ಹಾಗೂ ಸಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಬಹುದು ಎಂದರು. ಇದೆ ಸಂದರ್ಭದಲ್ಲಿ ಕಾರ್ಯಕ್ರಮದ ಪ್ರಚಾರ, ಯುವಜನರನ್ನು ತಲುಪುವ ಕಾರ್ಯತಂತ್ರ ಹಾಗೂ ವಿವಿಧ ಹಂತಗಳಲ್ಲಿ ಕೈಗೊಳ್ಳಬೇಕಾದ ಚಟುವಟಿಕೆಗಳ ಕುರಿತು ಸಭೆಗೆ ಮಾಹಿತಿ ನೀಡಿದರು. 'ಭೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಹೆಚ್ ವೈ ಮೀಸೆ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಶಾಂತ್ ವರಗಪ್ಪನವರ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು, ಮೈ ಭಾರತ್ ಜಿಲ್ಲಾ ಸಲಹಾ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

# ನಾಳೆ ಮುಸ್ಲಿಂ ಶಿಕ್ಷಕರ ಕ್ಷೇಮಾಮಾಭಿವೃದ್ಧಿ ಸಂಘದಿಂದ ಉಚಿತ ವೈದ್ಯಕೀಯ ಶಿಬಿರ : ಮೆಹತಾಬ್




ಬಳ್ಳಾರಿ: ಮುಸ್ಲಿಂ ಶಿಕ್ಷಕರ ಕ್ಷೇಮಾಭಿವೃದ್ಧಿ ಸಂಘ ಬಳ್ಳಾರಿ ಜಿಲ್ಲಾ ಘಟಕದ ವತಿಯಿಂದ ನಾಳೆ ಅಂದರೆ ಭಾನುವಾರದಂದು ನಗರದ ಕೌಲ್ ಬಜಾರ್ ಫಸ್ಟ್ ಗೇಟ್ ಹತ್ತಿರದ ಮಹಮದೀಯ ಕಾಲೇಜ್ ಆವರಣದಲ್ಲಿ ಉಚಿತ ವೈದ್ಯಕೀಯ ಶಿಬಿರವನ್ನು ಏರ್ಪಡಿಸಲಾಗಿದೆ ಎಂದು ಸಂಘದ ಗೌರವ ಅಧ್ಯಕ್ಷ ಮೆಹತಾಬ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಮ್ಮ ಸಂಘದಿಂದ ಕೇವಲ ನೌಕರರಿಗೆ ಮಾತ್ರ ಉಪಯೋಗವಾಗದೆ ಸಾರ್ವಜನಿಕರಿಗೂ ಅನುಕೂಲವಾಗಬೇಕೆಂಬ ದೃಷ್ಟಿಯಿಂದ ಪ್ರಪ್ರಥಮ ಬಾರಿಗೆ ಸೆಪ್ಟೆಂಬರ್ 20 ನಾಳೆ ಭಾನುವಾರದಂದು ಮುಂಜಾನೆ 10 ಗಂಟೆಯಿಂದ ಸಂಜೆ ನಾಲ್ಕು ಗಂಟೆಯವರೆಗೆ ಉಚಿತ ವೈದ್ಯಕೀಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗುತ್ತಿದೆ, ಈ ಶಿಬಿರದಲ್ಲಿ ನಿಪುಣ ವೈದ್ಯರು ಕಣ್ಣು ಹೃದಯ ಬಿಪಿ ಶುಗರ್, ಇಸಿಜಿ ಎಕೋ ಸೇರಿದಂತೆ ಹಲವು ರೋಗಗಳ ತಪಾಸಣೆಯನ್ನು ನಡೆಸಲಿದ್ದಾರೆ, ಗಂಭೀರ ಕಾಯಿಲೆ ಉಳ್ಳವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆಗೆ ಕಳಿಸಿ ಅಲ್ಲಿಯೂ ಸಹ ಉಚಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆಯನ್ನು ನೀಡಲಾಗುವುದು ಎಂದರು. ಈ ವೈದ್ಯಕೀಯ ಶಿಬಿರವನ್ನು ಎಡಿಸಿ ಮಹಮ್ಮದ್ ಜುಬೇರ್ ಉದ್ಘಾಟಿಸಲಿದ್ದಾರೆ ಅವರ ಜೊತೆಗೆ ಜಿಲ್ಲೆಯ ಹಿರಿಯ ಅಧಿಕಾರಿಗಳಾದ ಎಸ್ಪಿ ಡಿಎಸ್ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ, ನಗರ ಮತ್ತು ಸುತ್ತಮುತ್ತಲ ಪ್ರದೇಶದ ಸಾರ್ವಜನಿಕರು ಈ ವೈದ್ಯಕೀಯ ತಪಾಸಣಾ ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಮನವಿ ಮಾಡಿದರು. ಈ ಪತ್ರಿಕಾಗೋಷ್ಠಿಯಲ್ಲಿ ಆಲಂಬಾಷ, ಇಲಿಯಾಸ್, ಎಂಡಿ ರಿಜ್ವಾನ್, ಅಲ್ಲಾಭಕಾಶ್, ಶೇಕ್ಷವಲಿ, ದಾದಾಪೀರ್, ಮೆಹಬೂಬ್ ಬಾಷಾ, ವಾಜಿದ್, ಸಿರಾಜ್ ಪಾಶಾ, ಸೇರಿದಂತೆ ಇತರರಿದ್ದರು.

# ಮೋದಿ ಜನ್ಮದಿನ: ಬಿಜೆಪಿ ವತಿಯಿಂದ ರಕ್ತದಾನ ಶಿಬಿರ

ಬಳ್ಳಾರಿ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಭಾರತೀಯ ಜನತಾ ಪಕ್ಷದ ಬಳ್ಳಾರಿ ನಗರ ಮಂಡಲದ ವತಿಯಿಂದ ನಗರದ ತಾಳೂರು ರಸ್ತೆಯ ಗೋವಿಂದಪ್ಪ ಕಲ್ಯಾಣ ಮಂಟಪದಲ್ಲಿ ಸೇವಾ ಸಂಕಲ್ಪ ಅಭಿಯಾನದಡಿ ರಕ್ತದಾನ ಶಿಬಿರ ಆಯೋಜಿಸಲಾಯಿತು.

ಶಿಬಿರದಲ್ಲಿ ಮಾಜಿ ಶಾಸಕ ಸೋಮಶೇಖರ್ ರೆಡ್ಡಿ ಹಾಗೂ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಭಾಗವಹಿಸಿ ರಕ್ತದಾನ ಮಾಡುವ ಮೂಲಕ ಸಾಮಾಜಿಕ ಸೇವೆಗೆ ಕೈಜೋಡಿಸಿದರು.



# ಕ್ರೀಡೆಯಲ್ಲಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳೇ ಮೇಲುಗೈ: ನೇಮಿರಾಜ್



ಹಗರಿಬೊಮ್ಮನಹಳ್ಳಿ : ರಾಜಮಟ್ಟದ ಕ್ರೀಡೆಯಲ್ಲಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳೇ ಹೆಚ್ಚಾಗಿ ಹೊರಹೊಮ್ಮುತ್ತಿದ್ದಾರೆ ಎಂದು ಶಾಸಕ ಕೆ ನೇಮಿರಾಜ್ ನಾಯ್ಕ ಹೇಳಿದರು.

ಪಟ್ಟಣದ ಗಂ ಭೀ ತಾಲೂಕ ಕ್ರೀಡಾಂಗಣದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ತಾಲೂಕ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು ವಿದ್ಯಾರ್ಥಿಗಳು ವಿದ್ಯೆಯ ಜೊತೆ ಕ್ರೀಡೆಗಳನ್ನು ಬೆಳೆಸಿಕೊಳ್ಳುವಂತಹ ಮನೋಭಾವ ಇರಬೇಕು ಎಂದರು.

# ರಕ್ತದಾನ, ಕಣ್ಣಿನ ತಪಾಸಣಾ ಶಿಬಿರ, ಶೋಭಾಯಾತ್ರೆ 20ರಂದು

ಬಳ್ಳಾರಿ: ಸಾರ್ವಜನಿಕ ಶ್ರೀ ಗಣೇಶೋತ್ಸವ ಸಮಿತಿ ಹಾಗೂ ಹಿಂದೂ ಮಹಾ ಮಂಡಳಿಯಿಂದ ಸೆ.20ರಂದು ಬೆಳಿಗ್ಗೆ 8ರಿಂದ ಸಂಜೆ 6ರ ವರೆಗೆ ನಗರದ ಗಾಂಧಿ ವನದಲ್ಲಿ ರಕ್ತದಾನ ಹಾಗೂ ಕಣ್ಣಿನ ಉಚಿತ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಗೌರವಾಧ್ಯಕ್ಷ ಬ್ರಹ್ಮಯ್ಯ ನಾಯ್ಡು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1000 ಯುನಿಟ್ ರಕ್ತ ಸಂಗ್ರಹದ ಗುರಿ ಹೊಂದಲಾಗಿದ್ದು, ಅಗತ್ಯವಿರುವವರಿಗೆ ಕಣ್ಣಿನ ಉಚಿತ ಶಸ್ತ್ರಚಿಕಿತ್ಸೆ ಮಾಡಿಸಲಾಗುವುದು. ಸೆ.18ರಂದು ಸಹಸ್ರ ಕಂಠಗಳಿಂದ 'ವಂದೇ ಮಾತರಂ' ಗಾಯನ, ಸೆ.19ರಂದು ಮಾತ್ರ ಸಂಗಮ, ಸೆ.23ರಂದು ಕಬಡ್ಡಿ ಪಂದ್ಯಾವಳಿ, ಸೆ.24ರಂದು ಮಹಾಗಣಪತಿ ಶೋಭಾಯಾತ್ರೆ ನಡೆಯಲಿದೆ. ಪ್ರಸಾದ ಹರಾಜಿನ ಹಣವನ್ನು ವಿದ್ಯಾರ್ಥಿಗಳ ಶಿಷ್ಯವೇತನಕ್ಕೆ ನೀಡಲಾಗುವುದು ಎಂದರು. ಸಮಿತಿ ಪದಾಧಿಕಾರಿಗಳಾದ ಮಲ್ಲೇಶಪ್ಪ, ಕಿಶೋರ್, ಅಶೋಕ್ ಇದ್ದರು.



ಅಂತರರಾಷ್ಟ್ರೀಯ ಹಿಂದೂ ಪರಿಷತ್ ಶೋಭಾಯಾತ್ರೆ: ಅಂತರರಾಷ್ಟ್ರೀಯ ಹಿಂದೂ ಪರಿಷತ್ ಹಾಗೂ ರಾಷ್ಟ್ರೀಯ ಬಜರಂಗದಳದಿಂದ ಸೆ.20ರಂದು ಸಂಜೆ 4 ಗಂಟೆಗೆ 'ಹಿಂದೂ ಮಹಾಗಣಪತಿ ಶೋಭಾಯಾತ್ರೆ' ಆಯೋಜಿಸಲಾಗಿದೆ ಎಂದು ಉತ್ಸವದ ಪ್ರಧಾನ ಕಾರ್ಯದರ್ಶಿ ಶರಣಪ್ಪ ಪಾಟೀಲ್ ತಿಳಿಸಿದರು.

# ಧಾರ್ಮಿಕ ತಾರತಮ್ಯ, ತುಷ್ಟೀಕರಣ ಸಹಿಸಲ್ಲ: ಯತ್ನಾಳ್

ಸಿರುಗುಪ್ಪ: ರಾಜ್ಯದಲ್ಲಿ ಧಾರ್ಮಿಕ ತಾರತಮ್ಯ ಹಾಗೂ ತುಷ್ಟೀಕರಣಕ್ಕೆ ಅವಕಾಶ ನೀಡಬಾರದು ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು. ನಗರದ ನಿಟ್ಟೂರು ನರಸಿಂಹಮೂರ್ತಿ ಬಯಲು ಜಾಗದಲ್ಲಿ ನಡೆದ ಬೃಹತ್ ಹಿಂದೂ ಮಹಾಗಣಪತಿ ಉತ್ಸವದ ಸಾರ್ವಜನಿಕ ಸಮಾವೇಶದಲ್ಲಿ ಅವರು ಮಾತನಾಡಿದರು.

ಗಣೇಶೋತ್ಸವದ ಮೆರವಣಿಗೆ ಹಾಗೂ ವಿಸರ್ಜನೆ ಸಂದರ್ಭದಲ್ಲಿ ಆಡಳಿತದಿಂದ ಅನಗತ್ಯ ತೊಂದ-ರೆ ನೀಡಲಾಗುತ್ತಿದೆ ಎಂದು ಯತ್ನಾಳ್ ಆರೋಪಿಸಿದರು. ಧಾರ್ಮಿಕ ಉತ್ಸವಗಳನ್ನು ಶಾಂತಿಯುತವಾಗಿ ಆಚರಿಸಲು ಅಗತ್ಯ ಸಹಕಾರ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಗಣೇಶೋತ್ಸವ ಸಂದರ್ಭದಲ್ಲಿ ಮಾತ್ರ ಡಿಜೆ ಹಾಗೂ ಶಬ್ದ ಮಾಲಿನ್ಯದ ನಿಯಮಗಳನ್ನು ಪ್ರಸ್ತಾಪಿಸಲಾಗುತ್ತಿದೆ ಎಂದು ಅವರು ಪ್ರಶ್ನಿಸಿದರು. ಇತರ ಮೆರವಣಿಗೆಗಳ ಸಂದರ್ಭದಲ್ಲಿ ನ್ಯಾಯಾಲಯದ ಆದೇಶಗಳನ್ನು ಹೇಗೆ ಅನುಸರಿಸಲಾಗುತ್ತಿದೆ ಎಂಬುದನ್ನು ಸರ್ಕಾರ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುರಿತು ಕೂಡ ಯತ್ನಾಳ್ ಸರ್ಕಾರದ ವಿರುದ್ಧ ಆರೋಪಗಳನ್ನು ಮಾಡಿದರು. ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವವರ ಮೇಲೆ ಪ್ರಕರಣಗಳು ಹಾಗೂ ನೋಟಿಸ್‌ಗಳ ಮೂಲಕ ಒತ್ತಡ ಹೇರುವುದು ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟರು.

ಹಿಂದೂ ಸಮಾಜ ಒಗ್ಗಟ್ಟಿನಿಂದ ಇರಬೇಕು ಹಾಗೂ ಮತದಾರರು ಹಣಕ್ಕೆ ತಮ್ಮ ಮತವನ್ನು ಮಾರಿಕೊಳ್ಳಬಾರದು ಎಂದು ಯತ್ನಾಳ್ ಕರೆ ನೀಡಿದರು. ಹಿಂದುತ್ವ ಮತ್ತು ರಾಷ್ಟ್ರೀಯತೆಯ ವಿಚಾರದಲ್ಲಿ ತಮ್ಮ ಹೋರಾಟ ಮುಂದುವರಿಸುವುದಾಗಿ ಅವರು ಹೇಳಿದರು. ಉತ್ಸವ ಸಮಿತಿಯ ಸದಸ್ಯರು, ಮುಖಂಡರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.




# ಸೆ.21ರಿಂದ ಅಲ್ಲಂ ಸುಮಂಗಳಮ್ಮ ಕಾಲೇಜಿನ ಸುವರ್ಣ ಮಹೋತ್ಸವ



ಬಳ್ಳಾರಿ : ನಗರದ ವೀರಶೈವ ವಿದ್ಯಾವರ್ಧಕ ಸಂಘದ ಅಲ್ಲಂ ಸುಮಂಗಳಮ್ಮ ಮಹಿಳಾ ಕಾಲೇಜಿನ ಸುವರ್ಣ ಮಹೋತ್ಸವ ಸಮಾರಂಭವು ಸೆ.21 ಮತ್ತು 22ರಂದು ಕಾಲೇಜಿನ ಆವರಣದಲ್ಲಿ ನಡೆಯಲಿದೆ ಎಂದು ಸಂಘದ ಖಜಾಂಚಿ ಬೈಲುವದ್ದಿಗೇರಿ ಎರ್ರಿಸ್ವಾಮಿ ಹಾಗೂ ಕಾಲೇಜಿನ ಆಡಳಿತ ಮಂಡಳಿ ಅಧ್ಯ-ಕ್ಷೆ ಕಾತ್ಯಾಯಿನಿ ಮರಿದೇವಯ್ಯ ತಿಳಿಸಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1969ರಲ್ಲಿ ಕೇವಲ 164 ವಿದ್ಯಾರ್ಥಿನಿಯರೊಂದಿಗೆ ಆರಂಭಗೊಂಡ ಕಾಲೇಜಿನಲ್ಲಿ ಇದೀಗ 2,500ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದಾರೆ. ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯಕ್ಕೆ ಸಂಲಗ್ನತೆ ಹೊಂದಿರುವ ಕಾಲೇಜಿನಲ್ಲಿ ಎಂ.ಕಾಂ ಸ್ನಾತಕೋತ್ತರ ಪದವಿ ಶಿಕ್ಷಣವೂ ಲಭ್ಯವಿದೆ. ವಿದ್ಯಾರ್ಥಿನಿಯರು ಪದವಿ ಶಿಕ್ಷಣಕ್ಕಾಗಿ ಬೇರೆಡೆ ತೆರಳುವುದನ್ನು ತಪ್ಪಿಸುವ ಉದ್ದೇಶದಿಂದ ಈ ಮಹಿಳಾ ಕಾಲೇಜು ಆರಂಭಿಸಲಾಗಿತ್ತು. ಇಲ್ಲಿಯವರೆಗೆ 200ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ವಿಶ್ವವಿದ್ಯಾಲಯದ ರ್‍ಯಾಂಕ್ ಪಡೆದಿದ್ದಾರೆ ಎಂದು ತಿಳಿಸಿದರು. ಕಾಲೇಜಿಗೆ ಸರ್ಕಾರದಿಂದ 54 ಉಪನ್ಯಾಸಕರ ಹುದ್ದೆಗಳು ಮಂಜೂರಾಗಿದ್ದರೂ, ಪ್ರಸ್ತುತ 14 ಮಂದಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ. ಉಳಿದಂತೆ 60 ಅರೆಕಾಲಿಕ ಉಪನ್ಯಾಸಕರು ಸೇವೆ ಸಲ್ಲಿಸುತ್ತಿದ್ದಾರೆ. 2015ರಿಂದ ಸರ್ಕಾರ ಹೊಸ ಹುದ್ದೆಗಳನ್ನು ಮಂಜೂರು ಮಾಡುತ್ತಿಲ್ಲ. ಸಂಘದ ವ್ಯಾಪ್ತಿಯಲ್ಲಿ ಒಟ್ಟಾರೆ 108 ಹುದ್ದೆಗಳು ಖಾಲಿ ಇವೆ ಎಂದು ಬೈಲುವದ್ದಿಗೇರಿ ಎರ್ರಿಸ್ವಾಮಿ ಹೇಳಿದರು. ಸೆ.20ರಂದು ಬೆಳಿಗ್ಗೆ ನಗರದ ಬಸವ ಭವನದಿಂದ ವಿದ್ಯಾರ್ಥಿಗಳು, ಸಿಬ್ಬಂದಿ, ಸಂಘದ ಸದಸ್ಯರು ಹಾಗೂ ಪದಾಧಿಕಾರಿಗಳೊಂದಿಗೆ ಶೋಭಾಯಾತ್ರೆ ನಡೆಯಲಿದೆ.

# ರಾಷ್ಟ್ರೀಯ ಪೋಷಣ ಮಾಸಾಚರಣೆ



ಬಳ್ಳಾರಿ : ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದ 'ಪೋಷಣ್ ಅಭಿಯಾನ'ದ ಅಡಿಯಲ್ಲಿ ಪ್ರತಿ ವರ್ಷ ಆಚರಿಸಲಾಗುವ 30 ದಿನಗಳ ರಾಷ್ಟ್ರೀಯ ಜಾಗೃತಿ.ಅಭಿಯಾನದ

ಕಾರ್ಯಕ್ರಮದಲ್ಲಿ. ಉಪ ನಿರ್ದೇಶಕರಾದ ಗಂಗಪ್ಪ.ಹಾಗು ಮೇಲ್ವಿಚಾರಕಾರದ ಶ್ರೀಮತಿ ಲಕ್ಷ್ಮೀ ದೇವಿ. ಜಿಲ್ಲಾ ಮಿಷನ್ ಶಕ್ತಿ ಸಂಯೋಜಕಿ ಶ್ರೀಮತಿ ವಿದ್ಯಾ.ಲಿಂಗ ತಜ್ಞನರಾದ ಶ್ರೀ ಮತಿ ಅನ್ನಪೂರ್ಣ. ಮತ್ತು ಅಂಗನವಾಡಿ ಕಾರ್ಯಕರ್ತರು ಇದ್ದರು.

ಜಿಲ್ಲಾ ಅರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಂ.ಧರ್ಮನಗೌಡ ಇಲಾಖೆಯ ಸಂಪೂರ್ಣ ಮಾಹಿತಿ ನೀಡಿದರು.

ಅಪೌಷ್ಟಿಕತೆ ನಿರ್ಮೂಲನೆ: ಗರ್ಭಿಣಿಯರು, ಹಾಲುಣಿಸುವ ತಾಯಂದಿರು, ಹದಿಹರೆಯದ ಹೆಣ್ಣುಮಕ್ಕಳು ಮತ್ತು ಮಕ್ಕಳಲ್ಲಿ ಅಪೌಷ್ಟಿಕತೆ ಹಾಗೂ ರಕ್ತಹೀನತೆಯನ್ನು ತಡೆಗಟ್ಟುವುದು.
ಸಮುದಾಯದ ಪಾಲ್ಗೊಳ್ಳುವಿಕೆ: ಸಾರ್ವಜನಿಕರಲ್ಲಿ ಪೌಷ್ಟಿಕ ಆಹಾರದ ಮಹತ್ವದ ಬಗ್ಗೆ ಅರಿವು ಮೂಡಿಸಿ 'ಜನ ಆಂದೋಲನ'ವನ್ನು ರೂಪಿಸುವುದು.
ಮೊದಲ 1000 ದಿನಗಳ ಆರೈಕೆ: ಮಗುವಿನ ಗರ್ಭಾವಸ್ಥೆಯಿಂದ ಹಿಡಿದು 2 ವರ್ಷಗಳವರೆಗಿನ (ಮೊದಲ 1,000 ದಿನಗಳು) ಸೂಕ್ತ ಪೋಷಣೆ ಮತ್ತು ಆರೋಗ್ಯ ರಕ್ಷಣೆಗೆ ಆದ್ಯತೆ ನೀಡುವುದು ಎಂದು ತಿಳಿಸಿದರು. ಅಂಗನವಾಡಿ ಕೇಂದ್ರಗಳಲ್ಲಿ ಜಾಗೃತಿ: ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಸ್ಥಳೀಯವಾಗಿ ಲಭ್ಯವಿರುವ ಸಮತೋಲಿತ ಹಾಗೂ ಪೌಷ್ಟಿಕ ಆಹಾರಗಳ ಬಗ್ಗೆ ಮಾಹಿತಿ ನೀಡುವುದು.

ಆರೋಗ್ಯ ತಪಾಸಣೆ: ಮಕ್ಕಳ ಎತ್ತರ, ತೂಕದ ಅಳತೆ (ಮಗುವಿನ ಬೆಳವಣಿಗೆ ಮೇಲ್ವಿಚಾರಣೆ) ಮತ್ತು ಆರೋಗ್ಯ ಶಿಬಿರಗಳ ಆಯೋಜನೆ. ಪೋಷಣ್ ಟ್ರ್ಯಾಕರ್ ತಂತ್ರಜ್ಞಾನದ ಮೂಲಕ ತಾಯಿ ಮತ್ತು ಮಗುವಿಗೆ ತಲುಪುವ ಆರೋಗ್ಯ ಸೇವೆಗಳನ್ನು ಡಿಜಿಟಲ್ ರೂಪದಲ್ಲಿ ಮೇಲ್ವಿಚಾರಣೆ ಮಾಡುವುದು. ಇದರ ಜೊತೆಯಲ್ಲಿ ಬೇಟಿ ಬಚಾವೋ ಬೇಟಿ ಪಡವೋ.ಲಿಂಗ ಪಕ್ಷಪಾತ ತೊಲಗಿಸಿ.ಹೆಣ್ಣನ್ನು ಉಳಿಸಿ.ಹೆಣ್ಣನ್ನು ಬೆಳಸಿ ಹೆಣ್ಣು ಮಕ್ಕಳಿಗೆ ಓದಿಸಿ. ಹಾಗೂ ಮಾತೃವಂದನಾ.ಭಾಗ್ಯ ಲಕ್ಷ್ಮೀ. ಸುಕನ್ಯಾ ಸಂವೃದ್ದಿಯೋಜನೆ. ಯೋಜನೆಗಳ ಬಗ್ಗೆ ಗರ್ಭಿಣಿ ಮಹಿಳೆಯರಿಗೆ.ತಾಯಂದಿರಿಗೆ. ಮತ್ತು ಕಿಶೋರಿಯರಿಗೆ ಅರೋಗ್ಯ ಸಂಬಂಧಿಸಿದ ಮಾಹಿತಿ ನೀಡಲಾಯಿತು.

# ಡಿ-7 ಕಾಲುವೆಗೆ ಹೆಚ್ಚಿನ ನೀರು ಹರಿಸಲು ಆಗ್ರಹ




ಬಳ್ಳಾರಿ : ತುಂಗಭದ್ರ ಬಲದಂಡೆ ಮೇಲ್ಮಟ್ಟದ ಕಾಲುವೆಯ ವಿತರಣಾ ಕಾಲುವೆ ಡಿ-7ಕ್ಕೆ 600 ಕ್ಯೂಸೆಕ್ಗೂ ಅಧಿಕ ನೀರು ಹರಿಸಿ ರೈತರ ಬೆಳೆಗಳನ್ನು ರಕ್ಷಿಸಬೇಕು ಎಂದು ಆಗ್ರಹಿಸಿ ಎಐಕೆಕೆಎಂಎಸ್ ನೇತೃತ್ವದಲ್ಲಿ ರೈತರು ಇಂದು ಕುರುಗೋಡಿನ ನೀರಾವರಿ ಇಲಾಖೆಯ ಕಚೇರಿ ಬಳಿ ಅನಿರ್ದಿಷ್ಟಾವಧಿ ಅಹೋರಾತ್ರಿ ಧರಣಿ ಆರಂಭಿಸಿದ್ದಾರೆ

ಈ ಸಂದರ್ಭದಲ್ಲಿ ಮಾತನಾಡಿದ ಸಂಘಟನೆಯ ಮುಖಂಡರು, ಕಾಲುವೆ-7ನ್ನು ಅವಲಂಬಿಸಿರುವ ಸಾವಿರಾರು ರೈತರು ಇದುವರೆಗೂ ಸಹ ಬೀಜವನ್ನು ಬಿತ್ತಲು ಆಗದ ಪರಿಸ್ಥಿತಿಯಲ್ಲಿ ಇದ್ದಾರೆ. ಇದುವರೆಗೂ ಸಾಕಷ್ಟು ರೈತರ ಭೂಮಿಗೆ ಒಂದು ಹನಿ ಸಹ ನೀರು ತಲುಪಿಲ್ಲ. ಈಗಾಗಲೇ ಬಿತ್ತಿದ ಬೆಳೆಗಳು ಸಹ ನೀರಿನ ಕೊರತೆಯಿಂದ ಸಂಕಷ್ಟದಲ್ಲಿವೆ. ರೈತರ ಬೆಳೆ ಸಂಪೂರ್ಣವಾಗಿ ಕೈ ಸೇರುವವರೆಗೆ ಅಗತ್ಯ ಪ್ರಮಾಣದ ನೀರು ಹರಿಸಬೇಕು. ನೀರಿನ ಹಂಚಿಕೆಯಲ್ಲಿ ಕೃಷಿಗೆ ಮೊದಲ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿ. ಬೇಡಿಕೆ ಈಡೇರುವವರೆಗೆ ಹೋರಾಟ ಮುಂದುವರಿಯಲಿದೆ" ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾಧ್ಯಕ್ಷ ಗೋವಿಂದ, ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ ರೈತ ಮುಖಂಡ ಕಲಕಂಬ ಪಂಪಾಪತಿ, ತಾಲೂಕ್ ಕಾರ್ಯದರ್ಶಿ ಬಸವರಾಜ್, ರೈತರಾದ ಕೀರ್ತಿ ರೆಡ್ಡಿ, ನಾಗೇಶ್ವರ, ಹೇಮರೆಡ್ಡಿ, , ಏರಿಸ್ವಾಮಿ, ಮಲ್ಲಿಕಾರ್ಜುನರೆಡ್ಡಿ, ಹನುಮಂತ, ಮಾಬುಸಾಬ್, ನಾರಾಯಣ ರೆಡ್ಡಿ, ಕೃಷ್ಣಾರೆಡ್ಡಿ, ಬಸವನಗೌಡ, ಜಡಪ್ಪ ಮೊದಲಾದವರು ಪಾಲ್ಗೊಂಡಿದ್ದಾರೆ.

# ಕೊಡಗಿನಲ್ಲಿ ಹೆಚ್ಚುತ್ತಿದೆ ಕೆಂಗಣ್ಣು ಸೋಂಕು

ಮಡಿಕೇರಿ: ಕೊಡಗು ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಕೆಂಗಣ್ಣು ಸೋಂಕಿನ ಆತಂಕ ಎದುರಾಗಿದೆ. ಜಿಲ್ಲೆಯಲ್ಲಿ ಕಂಜಕ್ಟಿವೈಟಿಸ್ ಪ್ರಕರಣಗಳು ಹೆಚ್ಚಾಗುತ್ತಿದ್ದು, ಶಾಲಾ ಮಕ್ಕಳು ಸೇರಿದಂತೆ ಹಲವರು ಕಣ್ಣಿನ ಸೋಂಕಿನಿಂದ ಬಳಲುತ್ತಿದ್ದಾರೆ. ಸೋಂಕು ಒಬ್ಬರಿಂದ ಮತ್ತೊಬ್ಬರಿಗೆ ಸುಲಭವಾಗಿ ಹರಡುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆ ವಹಿಸುವಂತೆ ವೈದ್ಯರು ಸಲಹೆ ನೀಡಿದ್ದಾರೆ.

ಕೊಡಗಿನಲ್ಲಿ ಕೆಂಗಣ್ಣಿನ ಕಾಟ ಶುರುವಾಗಿದೆ. ಕಣ್ಣು ಕೆಂಪಾಗುವುದು, ನಿರಂತರವಾಗಿ ನೀರು ಸುರಿಯುವುದು, ತುರಿಕೆ ಹಾಗೂ ಕಣ್ಣಿನಲ್ಲಿ ಅಂಟಿಕೊಳ್ಳುವಂತಹ ಸಮಸ್ಯೆಗಳು ಕೆಂಗಣ್ಣು ಸೋಂಕಿನ ಪ್ರಮುಖ ಲಕ್ಷಣಗಳಾಗಿವೆ. ಇಂತಹ ಲಕ್ಷಣಗಳೊಂದಿಗೆ ಸೋಂಕಿತರು ಚಿಕಿತ್ಸೆಗಾಗಿ ಆಸ್ಪತ್ರೆಗಳತ್ತ ಬರುತ್ತಿದ್ದಾರೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.